# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 76 | FRIDAY 29-05-2026 | PRGI No : KNKAN/26/A0962 | Pages:4 | Rs.2.00 | M: 9742418836


## ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ ಸಿದ್ದರಾಮಯ್ಯ! ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗೆ ಪತ್ರ ಹಸ್ತಾಂತರ



ಬೆಂಗಳೂರು: ರಾಜ್ಯ ರಾಜಕೀಯದಲ್ಲಿ ಕೆಲವು ದಿನಗಳಿಂದ ನಡೆಯುತ್ತಿದ್ದ ಸಿಎಂ ಕುರ್ಚಿ ಕದನಕ್ಕೆ ತೆರೆ ಬಿದ್ದಿದ್ದು, ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಿದ್ದಾರೆ.

ಇಂದು ಮಧ್ಯಾಹ್ನ ಲೋಕಭವನಕ್ಕೆ ಆಗಮಿಸಿದ ಅವರು ತಮ್ಮ ರಾಜೀನಾಮೆ ಪತ್ರವನ್ನು ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಪ್ರಭು ಶಂಕರ್ ಅವರಿಗೆ ಸಲ್ಲಿಸಿದರು. ಈ ಮೂಲಕ ಕಳೆದ ಮೂರು ವರ್ಷಗಳ ಅವರ ಆಡಳಿತ ಅಂತ್ಯಗೊಂಡಿತು.

ರಾಜ್ಯಪಾಲರು ಇಂದೋರ್ ಗೆ ತೆರಳಿರುವ ಕಾರಣ ಸಿದ್ದರಾಮಯ್ಯ ಅವರು ತಮ್ಮ ರಾಜೀನಾಮೆ ಪತ್ರವನ್ನು ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗೆ ಹಸ್ತಾಂತರಿಸಿದರು. ಸದ್ಯಕ್ಕೆ ರಾಜೀನಾಮೆ ಪತ್ರವನ್ನು ಕಾರ್ಯದರ್ಶಿಗಳು ಸ್ವೀಕರಿಸಿದ್ದರೂ, ಸಂವಿಧಾನದ ನಿಯಮಾವಳಿಗಳ ಪ್ರಕಾರ ರಾಜ್ಯಪಾಲರು ಖುದ್ದಾಗಿ ಸಹಿ ಮಾಡಿದ ಬಳಿಕವೇ ರಾಜೀನಾಮೆ ಅಧಿಕೃತವಾಗಿ ಅಂಗೀಕಾರವಾಗಲಿದೆ.

ಮೂಲಗಳ ಪ್ರಕಾರ ರಾಜ್ಯಪಾಲರು ಇಂದು ರಾತ್ರಿ 7:30ಕ್ಕೆ ಬೆಂಗಳೂರಿಗೆ ಮರಳುವ ಸಾಧ್ಯತೆಯಿದೆ. ಹೀಗಾಗಿ ರಾಜ್ಯಪಾಲರು ಮರಳಿದ ಬಳಿಕವಷ್ಟೇ ರಾಜೀನಾಮೆ ಅಂಗೀಕಾರದ ಔಪಚಾರಿಕ ಪ್ರಕ್ರಿಯೆಗಳು ಪೂರ್ಣಗೊಳ್ಳಲಿವೆ.

ಈ ಮೂಲಕ ಐದು ದಶಕಗಳ ಸುದೀರ್ಘ ರಾಜಕೀಯ ಚರಿತ್ರೆಯ ದಣಿವರಿಯದ ಹೋರಾಟಗಾರ, ಸಮಾಜವಾದಿ ಸಿದ್ದರಾಮಯ್ಯ ಅವರ ಎರಡನೇ ಅವಧಿಯ ಮುಖ್ಯಮಂತ್ರಿ ಆಡಳಿತ ಅಂತ್ಯ ಕಂಡಿದೆ. ಹೈಕಮಾಂಡ್ ಸೂಚನೆ ಮತ್ತು ರಾಹುಲ್ ಗಾಂಧಿ ಅವರ ಸಂದೇಶಕ್ಕೆ ಗೌರವ ನೀಡಿ, ಸಿದ್ದರಾಮಯ್ಯ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ ಎನ್ನಲಾಗಿದೆ.

ಇದಕ್ಕೂ ಮುನ್ನಾ ಇಂದು ಬೆಳಿಗ್ಗೆ ಮುಖ್ಯಮಂತ್ರಿಗಳ ಅಧಿಕೃತ ನಿವಾಸ 'ಕಾವೇರಿ'ಯಲ್ಲಿ ಸಚಿವರ ಕೊನೆಯ 'ಬ್ರೇಕ್‌ಫಾಸ್ಟ್ ಮೀಟಿಂಗ್' ನಡೆಯಿತು. ಉಪಹಾರ ಸಭೆಯಲ್ಲಿ ಭಾಗಿಯಾಗಿದ್ದ ಪ್ರಮುಖ ಮಂತ್ರಿಗಳು ಮತ್ತು ಆಪ್ತ ನಾಯಕರು ಸಿದ್ದರಾಮಯ್ಯ ಅವರ ಸುದೀರ್ಘ ಹೋರಾಟದ ಪಯಣವನ್ನು ನೆನೆದು ಭಾವುಕರಾದರು. ಹಲವು ಸಚಿವರ ಕಣ್ಣಾಲಿಗಳು ತೇವಗೊಂಡಿದ್ದವು. ಸಹೋದ್ಯೋಗಿ ಮಂತ್ರಿಗಳಿಗೆ ಧೈರ್ಯ ತುಂಬಿದ ಸಿದ್ದರಾಮಯ್ಯ ಮಧ್ಯಾಹ್ನ ಭೋಜನ ಬಳಿಕ ಲೋಕಭವನಕ್ಕೆ ತೆರಳಿ, ರಾಜೀನಾಮೆ ಪತ್ರ ಸಲ್ಲಿಸಿದ್ದಾರೆ.

## ಕಾಂಗ್ರೆಸ್ಸಿನ ಕುರ್ಚಿ ಕಚ್ಚಾಟದ ಪ್ರಹಸನ: ಕನ್ನಡಿಗರಿಗೆ ನಯಾಪೈಸೆ ಪ್ರಯೋಜನ ಇಲ್ಲ– ಬಿಜೆಪಿ



ಬೆಂಗಳೂರು: ಕರ್ನಾಟಕ ಕಾಂಗ್ರೆಸ್ಸಿನ ಕುರ್ಚಿ ಕಚ್ಚಾಟದ ಪ್ರಹಸನಕ್ಕೆ ತಾತ್ಕಾಲಿಕ ಅಂತ್ಯ ದೊರೆತಿದೆ. ಆದರೆ ಇದರಿಂದ ಕನ್ನಡಿಗರಿಗೆ ನಯಾಪೈಸೆ ಪ್ರಯೋಜನ ಇಲ್ಲ ಎಂದು ರಾಜ್ಯ ಬಿಜೆಪಿ ಗುರುವಾರ ಟೀಕಾ ಪ್ರಹಾರ ನಡೆಸಿದೆ.

ಸಿದ್ದರಾಮಯ್ಯ ಮುಖ್ಯಮಂತ್ರಿ ಹುದ್ದೆಗೆ ರಾಜೀನಾಮೆ ನೀಡಿದ ಬೆನ್ನಲ್ಲೇ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಈ ವಿಚಾರ ಹಂಚಿಕೊಂಡಿರುವ ರಾಜ್ಯ ಬಿಜೆಪಿ, ಕಾಂಗ್ರೆಸ್ ಸರ್ಕಾರದ ದ ಮೂರು ವರ್ಷಗಳ ಸಾಧನೆ ಎಂದರೆ ಅದು ದಲಿತರ ಹಣ ದುರ್ಬಳಕೆ, ವಾಲ್ಮೀಕಿ ನಿಗಮದ ಹಣ ಲೂಟಿ, ಯುವಕರಿಗೆ ಟೋಪಿ, ರೈತರಿಗೆ ನೇಣು ಕುಣಿಕೆ, ಜನಸಾಮಾನ್ಯರಿಗೆ ಬೆಲೆ ಏರಿಕೆ, ಕರ್ನಾಟಕಕ್ಕೆ ಸಾಲದ ಶೂಲ ಹೊದಿಕೆ ಎಂದು ಆರೋಪಿಸಿದೆ.

ಕರ್ನಾಟಕದ ಅಭಿವೃದ್ಧಿಯನ್ನು ಸಂಪೂರ್ಣ ಸ್ತಬ್ಧಗೊಳಿಸಿ, ಕಲೆಕ್ಷನ್–ಕರಪ್ಷನ್–ಕಮಿಷನ್‌ನಲ್ಲಿಯೇ ಮೂರು ವರ್ಷ ದೂಡಿ, ಈಗ ರಾಜೀನಾಮೆ ಎಂಬ ಅಲ್ಪ ವಿರಾಮ ಇಟ್ಟಿದ್ದಾರೆ ಎಂದು ಟೀಕಿಸಿದೆ.

ನೂತನವಾಗಿ ಯಾರೇ ಸಿಎಂ ಆಗಿ ಬಂದರೂ, ಕನ್ನಡಿಗರಿಗಾಗಲಿ, ಕರ್ನಾಟಕಕ್ಕಾಗಲಿ ನಯಾಪೈಸೆ ಪ್ರಯೋಜನ ಇಲ್ಲ. ಬಡವರು, ಶ್ರಮಿಕರು, ರೈತರು, ಯುವಕರು, ಮಹಿಳೆಯರು, ದೀನ–ದಲಿತರು, ಹಿಂದುಳಿದವರನ್ನು ಹಿಂಸಿಸಿ, ಶೋಷಿಸಿ ಸರ್ಕಾರ ನಡೆಸುವ ಇವರ ಪ್ರವೃತ್ತಿ ಮುಂದುವರೆಯುತ್ತದೆ ಹೊರತು ಬದಲಾಗುವುದಿಲ್ಲ ಎಂದು ಹೇಳಿದೆ.

ಕರ್ನಾಟಕವನ್ನು ಸಂಪೂರ್ಣ ದಿವಾಳಿ ಮಾಡುವುದು ಹಾಗೂ ಕಾಂಗ್ರೆಸ್ ಹೈಕಮಾಂಡಿಗೆ ಕರ್ನಾಟಕವನ್ನು ಎಟಿಎಂ ಮಾಡುವುದು ಎರಡೇ ಇವರ ಅಜೆಂಡಾ. ಹಾಗಾಗಿ, ಆದಷ್ಟು ಬೇಗ ಈ ಜನವಿರೋಧಿ ಸರ್ಕಾರ ತೊಲಗಿದರೆ ಕನ್ನಡಿಗರಿಗೆ ನೆಮ್ಮದಿಯ ದಿನ ಸಿಗಲಿದೆ ಎಂದು ಬಿಜೆಪಿ ಬಯಸಿದೆ.

## ಶಿಕ್ಷಣ ಸಮಾಜವನ್ನು ಬದಲಾಯಿಸುವ ಶಕ್ತಿಯಾಗಿದೆ
## ನಿಮ್ಮ ಯಶಸ್ಸು ಇಡೀ ಸಮಾಜಕ್ಕೆ ಮಾದರಿ: ಐಪಿಎಸ್ ಅಧಿಕಾರಿ ರವೀಂದ್ರ ಗಡಾದಿ



**ಬೆಳಗಾವಿ ವಾರ್ತೆ ಅಥಣಿ:** ಚಲವಾದಿ (ಬಲಗೈ) ಸಮುದಾಯ ನೌಕರರ ಸಂಘ ಅಥಣಿ ಇವರ ವತಿಯಿಂದ 2025–26ನೇ ಸಾಲಿನ ಎಸ್ಎಸ್ಎಲ್‌ಸಿ ಮತ್ತು ಪಿಯುಸಿ ದ್ವಿತೀಯ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಶೇ 80ಕ್ಕಿಂತ ಹೆಚ್ಚು ಅಂಕ ಪಡೆದ ಪರಿಶಿಷ್ಟ ಜಾತಿಯ ಬಲಗೈ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಬುಧವಾರ ರಂದು ಭಗವಾನ್ ಬುದ್ದ ಹಾಗೂ ಡಾ.ಬಿ ಆರ್ ಅಂಬೇಡ್ಕರ್ ಅವರ ಫೋಟೊ ಪೂಜೆ ಮಾಡುವುದರ ಮೂಲಕ ಶಿವಣಗಿ ಮಂಗಲ ಕಾರ್ಯಾಲಯದಲ್ಲಿ ಜರುಗಿತು

ಈ ವೇಳೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಐಪಿಎಸ್ ಅಧಿಕಾರಿ ರವಿಂದ್ರ ಗಡಾದಿ ಅವರು ವಿದ್ಯಾರ್ಥಿಗಳು ಅಂಕ ಗಳಿಕೆ ಮಾಡುವುದು ಮುಖ್ಯ ಆದರೆ ಅಂಕಗಳ ಜೊತೆಗೆ ಜ್ಞಾನ ಸಂಸ್ಕಾರ ಮತ್ತು ಸಮಾಜದ ಬಗ್ಗೆ ಕಾಳಜಿ ಬೆಳೆಸಿಕೊಳ್ಳಬೇಕು ಶಿಕ್ಷಣವು ನಮ್ಮ ಬದುಕನ್ನು ಮಾತ್ರವಲ್ಲ ಇಡೀ ಸಮಾಜವನ್ನು ಬದಲಾಯಿಸುವ ಶಕ್ತಿ ಹೊಂದಿದೆ ಡಾ. ಬಿ.ಆರ್ ಅಂಬೇಡ್ಕರ್ ಅವರು ಹೇಳಿದಂತೆ ಶಿಕ್ಷಣ ಸಂಘಟನೆ ಹೋರಾಟ ಈ ಮೂರು ಸೂತ್ರಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಯಾವುದೇ ಗುರಿ ಮುಟ್ಟಲು ಸಾಧ್ಯ ಎಂದು ಕಿವಿಮಾತು ಹೇಳಿದ ಅವರು

ನಮ್ಮ ಸಮುದಾಯದ ಮಕ್ಕಳು ಕೇವಲ ನೌಕರರಾಗದೆ ಆಡಳಿತಗಾರರಾಗಬೇಕು ಇದಕ್ಕಾಗಿ ಸ್ಪರ್ಧಾತ್ಮಕ ಪರೀಕ್ಷೆಗಳತ್ತ ಗಮನ ಹರಿಸಿ ನಿಮ್ಮ ಯಶಸ್ಸು ಇಡೀ ಸಮಾಜಕ್ಕೆ ಮಾದರಿಯಾಗುತ್ತದೆ ಪೋಷಕರು ಮಕ್ಕಳಿಗೆ ಒತ್ತಡ ಹೇರದೆ ಅವರ ಆಸಕ್ತಿಗೆ ಬೆಂಬಲ ನೀಡಬೇಕು ಎಂದು ಅವರು ಸಲಹೆ ನೀಡಿದರು

ಸಮಾಜದ ನೌಕರರ ಸಂಘವು ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಿದ್ದು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಉತ್ತೇಜನ ನೀಡುವ ಸಂಘದ ಈ ಕಾರ್ಯ ಶ್ಲಾಘನೀಯವಾಗಿದೆ ಎಂದರು

ಇನ್ನೂ ಬೆಂಗಳೂರಿನ ಅಕ್ಕ ಐಎಎಸ್ ಅಕಾಡೆಮಿಯ ನಿರ್ದೇಶಕ ಡಾ. ಶಿವಕುಮಾರ ಅವರು ಮಾತನಾಡಿ ವಿದ್ಯಾರ್ಥಿಗಳು ಪ್ರತಿದಿನ ಆರು ಗಂಟೆ ಶ್ರದ್ಧೆಯಿಂದ ಅಭ್ಯಾಸ ಮಾಡಿದರೆ ಅದು ಬಾಬಾ ಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ ಅವರಿಗೆ ಸಲ್ಲಿಸುವ ನಿಜವಾದ ಗೌರವವಾಗುತ್ತದೆ

ಅದೇ ರೀತಿ ಪಾಲಕರು ಸಹ ತಮ್ಮ ಮಕ್ಕಳ ವಿದ್ಯಾಭ್ಯಾಸದ ಕಡೆ ವಿಶೇಷ ಗಮನ ಹರಿಸಬೇಕು ಬಲಗೈ ಸಮುದಾಯದ ನೌಕರರು ಎಸ್ಎಸ್ಎಲ್‌ಸಿಯಲ್ಲಿ ಪ್ರತಿ ವರ್ಷ 550ಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಉತ್ತಮ ಶಾಲಾ ಕಾಲೇಜುಗಳಿಗೆ ಸೇರಿಸಲು ಸಹಕರಿಸಬೇಕು. ಹೀಗೆ ಮಾಡಿದರೆ ನಿಮ್ಮ ತಾಲೂಕಿನಲ್ಲಿ ನಮ್ಮ ಬಲಗೈ ಸಮುದಾಯವು ಶೈಕ್ಷಣಿಕವಾಗಿ ಶ್ರೀಮಂತ ಸಮುದಾಯವೆಂದು ಗುರುತಿಸಿಕೊಳ್ಳುತ್ತದೆ

ಬಾಬಾ ಸಾಹೇಬ್ ಅಂಬೇಡ್ಕರ್ ಅವರನ್ನು ಪ್ರೇರಣೆಯಾಗಿಟ್ಟುಕೊಂಡು ವಿದ್ಯಾಭ್ಯಾಸ ಮಾಡಿದರೆ, ಗುರಿ ಮುಟ್ಟುವುದು ಖಂಡಿತ ಸಾಧ್ಯ ಅಂಬೇಡ್ಕರ್ ಅವರನ್ನು ಕೇವಲ ಮೆರವಣಿಗೆಯಲ್ಲಿ ಕಾಣದೆ ಅವರ ಬರವಣಿಗೆಯಲ್ಲಿ ಕಾಣಬೇಕು ಪುತ್ಥಳಿಯಲ್ಲಿ ಕಾಣದೆ ಅವರ ಪುಸ್ತಕಗಳಲ್ಲಿ ಕಾಣಬೇಕು ಎಂದು ಕರೆ ನೀಡಿದರು.

ಪ್ರಾಸ್ತಾವಿಕವಾಗಿ ಚಲವಾದಿ ಸಮುದಾಯದ ನೌಕರ ಸಂಘದ ಅಧ್ಯಯನದ ಮಹಾಲಿಂಗ ಮೇತ್ರಿ ಹಾಗೂ ಬಿ.ಸಂತೋಷ ಮಾತನಾಡಿದರು ಹಾಗೇಯೆ ಶೇ.80% ಕಿಂತ ಅಧಿಕ ಪ್ರತಿಶತ ಪಡೆದ ಎಸ್ಎಸ್ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳನ್ನು ಸನ್ಮಾನ ಮಾಡಿ ಸತ್ಕರಿಸಿದರು

ಈ ಸಂದರ್ಭದಲ್ಲಿ ಬಂತೇಜೀ ಪ್ರಜ್ಞಾಭೋಧಿ ಥೆರೋ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ. ವಿಲಾಸ ಕಾಂಬಳೆ, ಚಲವಾದಿ ಸಮುದಾಯ ನೌಕರರ ಸಂಘದ ಕಾರ್ಯದರ್ಶಿ ಮಹಾಂತೇಶ ಕಾಂಬಳೆ, ಅಪ್ಪಾಸಾಬ ಸುರ್ಯವಂಶಿ, ಖಜಾಂಚಿ ನಾಗರಾಜ ಕಾಂಬಳೆ,ಸದಸ್ಯರಾದ ಭರತ ಕಾಂಬಳೆ, ಶಿವಾನಂದ ಮೇಲ್ಗಡೆ, ಸಂಜಯ ಸಾಗರ, ಮಲ್ಲೇಶ ಗೊಂದಳೆ,ಉಮೇಶ ಪಾಂಗಿ, ಅಜೀತ ಕುಟಗೊಳಿ,ಕುಮಾರ ಸತ್ತಿಕರ, ವಿಜಯ ಕನಾಳ,ಸೇರಿದಂತೆ ತಾಲೂಕಿನ ದಲಿತಪರ ಸಂಘಟನೆಗಳು ಹಾಗೂ ವಿದ್ಯಾರ್ಥಿಗಳು ಪಾಲಕರು ಉಪಸ್ಥಿತರಿದ್ದರು.

ನಿರೂಪಣೆ ಶಿವಾನಂದ ಮೇಲ್ಗಡೆ, ಸ್ವಾಗತ ಮಹಾಲಿಂಗ ಮೇತ್ರಿ ಮಾಡಿದರು

## ಜಿಲ್ಲಾ ತಂಬಾಕು ನಿಷೇಧ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ



**ಬೆಳಗಾವಿ ವಾರ್ತೆ ಗದಗ:** ದಿನಾಂಕ 26.05.2026 ರಂದು ಶ್ರೀ ಶ್ರೀಧರ್.ಸಿ.ಎನ್. ಮಾನ್ಯ ಜಿಲ್ಲಾಧಿಕಾರಿಗಳು ಗದಗ ಜಿಲ್ಲೆ ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾ ತಂಬಾಕು ನಿಷೇಧ ಕೋಶ ಗದಗದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿಯ ಸಭೆ ಹಮ್ಮಿಕೊಳ್ಳಲಾಯಿತು. ಸಭೆಯಲ್ಲಿ ಮೊದಲಿಗೆ ಡಾ.ಎಸ್.ಎಸ್.ನೀಲಗುಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಗದಗರವರು ಸಭೆಗೆ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡುತ್ತ ವಿಶ್ವ ಆರೋಗ್ಯ ಸಂಸ್ಥೆಯು ಪ್ರತಿ ವರ್ಷ ಮೇ 31 ವಿಶ್ವ ತಂಬಾಕು ರಹಿತ ದಿನವೆಂದು ಘೋಷಿಸಿದ ಈ ವರ್ಷ ವಿಶ್ವ ತಂಬಾಕು ರಹಿತ ದಿನದ ಘೋಷ ವಾಕ್ಯ "ಆಕರ್ಷಣೆಯನ್ನು ಬಹಿರಂಗ ಪಡಿಸುವದು, ನಿಕೋಟಿನ್ ಮತ್ತು ತಂಬಾಕು ವ್ಯಸನವನ್ನು ಎದರಿಸುವದು" ಈ ಹಿನ್ನಲಿಯಲ್ಲಿ ಮೇ 31 ರಿಂದ ಜೂನ 30 ರವರೆಗೆ ಜಿಲ್ಲೆಯ್ಯಾದಂತ ಗ್ರಾಮ,ತಾಲೂಕ ಹಾಗೂ ಜಿಲ್ಲಾ ಮಟ್ಟದಲ್ಲಿ ವಿವಿಧ ಇಲಾಖೆಯ ಹಾಗೂ ಸಂಘ ಸಂಸ್ಥೆಗಳ ಸಹಯೋಗದಲ್ಲಿ ತಂಬಾಕು ಮತ್ತು ನಿಕೋಟಿನ್ ಉತ್ಪನ್ನಗಳ ಸೇವನೆಗಳ ದುಷ್ಪರಿಣಾಮ ಬಗ್ಗೆ ಜನಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸೂಚಿಸಿರುವುದಾಗಿ ಸಭೆಗೆ ತಿಳಿಸಿದರು.

ಈ ನಿಟ್ಟಿನಲ್ಲಿ ಜಿಲ್ಲೆಯ್ಯಾದಂತ ತಂಬಾಕು ನಿಯಂತ್ರಣ ಕಾಯ್ದೆ (ಕೋಟ್ಪಾ–2003) ಕುರಿತ ವಿಷಶೆ ದಾಳಿಗಳನ್ನು ಹಮ್ಮಿಕೊಳ್ಳುವುದು, ವಿಶೇಶವಾಗಿ ಶಿಕ್ಷಣ ಸಂಸ್ಥೆಗಳ ಸುತ್ತ–ಮುತ್ತ ತಂಬಾಕು ನಿಷೇಧ, ಜಾಹೀರಾತು ವಿರುದ್ದ, ಉತ್ಪನ್ನಗಳ ಮೇಲಿನ ಆರೋಗ್ಯ ಎಚ್ಚರಿಕೆ ಚಿಹ್ನೆ ಮುದ್ರಣ, ಹಾಗೂ ಇತರೆ ಸೆಕ್ಷನ್‌ಗಳ ವಿರುದ್ಧ ವಿವಿಧ ಇಲಾಖೆಗಳ ಸಹಯೋಗದಲ್ಲಿ ಕ್ರಮ ಕೈಗೊಳ್ಳಲು, ಜಿಲ್ಲೆಯ ಶಿಕ್ಷಣ ಸಂಸ್ಥೆಗಳನ್ನು ತಂಬಾಕು ಮುಕ್ತ ಘೋಷಣೆ ಮಾಡಲು, ತಂಬಾಕು ಮಾರಾಟ ಪರವಾನಿಗೆಯನ್ನು ಎಲ್ಲಾ ತಂಬಾಕು ಮಾರಾಟಗಾರರು ಸ್ಥಳೀಯ ಸಂಸ್ಥೆಗಳ ಮೂಲಕ ಕಡ್ಡಾಯವಾಗಿ ಪಡೆಯಲು, ಬಾಯಿ ಕ್ಯಾನ್ಸರ್ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲು, ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಜಾಗೃತಿ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳುವುದು, ಹಾಗೂ ಜಿಲ್ಲೆಯ ಎಲ್ಲಾ ಇಲಾಖೆಗಳು ಹಾಗೂ ಸಂಘ ಸಂಸ್ಥೆಗಳು ಜೂನ ತಿಂಗಳಿನಲ್ಲಿ ವಿಶ್ವ ತಂಬಾಕು ರಹಿತ ದಿನದ ಅಂಗವಾಗಿ ತಂಬಾಕು ವ್ಯಸನದಿಂದಾಗುವ ದುಷ್ಪರಿಣಾಮಗಳ ಕುರಿತು ಹೆಚ್ಚು ಹೆಚ್ಚು ಜಾಗೃತಿ ಕಾರ್ಯಕ್ರಮಗಳನ್ನು, ತಂಬಾಕು ನಿಷೇಧ ಕಾಯ್ದೆ ಕುರಿತು ಜಾಗೃತಿ ಹಾಗೂ ಕ್ರಮವಹಿಸುವುದು, ತಂಬಾಕು ವ್ಯಸನಗಳಿಗೆ ಆಪ್ತ ಸಮಾಲೋಚನ ಔಷಧೋಪಚಾರಗಳ ಮೂಲಕ ವ್ಯಸನ ಮುಕ್ತಗೊಳಿಸಲು ಮತ್ತು ಜಿಲ್ಲೆಯನ್ನು ತಂಬಾಕು ಮುಕ್ತ ಜಿಲ್ಲೆಯನ್ನಾಗಿಸಲು ಎಲ್ಲರೂ ಕೈ ಜೋಡಿಸಲು ಮಾನ್ಯ ಜಿಲ್ಲಾಧಿಕಾರಿಗಳು ಕರೆ ನೀಡಿದರು.

ಈ ಸಂದರ್ಭದಲ್ಲಿ ಮಾನ್ಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಜಿಲ್ಲಾ ಶಸ್ತ್ರಚಿಕಿತ್ಸಕರು ಜಿಲ್ಲಾ ಆಸ್ಪತ್ರೆ ಗದಗ, ಜಿಲ್ಲಾ ಸಮೀಕ್ಷಣಾಧಿಕಾರಿಗಳು, ಜಿಲ್ಲಾ ಅಸಾಂಕ್ರಮಿಕ ರೋಗಗಳ ನಿಯಂತ್ರಣ ಅಧಿಕಾರಿಗಳು, ಜಿಲ್ಲಾ ಕ್ಷಯರೋಗ ಕಮ್ ಕುಷ್ಠರೋಗ ನಿಯಂತ್ರಣ ಅಧಿಕಾರಿಗಳು, ಜಿಲ್ಲಾ ಆರ್.ಸಿ.ಹೆಚ್ ಕಮ್ ಡಿ.ಎಫ್.ಡ್ಲೂ ಅಧಿಕಾರಿಗಳು, ಜಿಲ್ಲಾ ಯೋಜನಾ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಆರೋಗ್ಯ ಶಿಕ್ಷಣ ಅಧಿಕಾರಿಗಳು, ಉಪನಿರ್ದೇಶಕರು ಸಾರ್ವಜನಿಕ ಶಿಕ್ಷಣ ಇಲಾಖೆಯ ಸಿಬ್ಬಂದಿ, ನಗರಸಭೆ ಗದಗ–ಬೆಟಗೇರಿ ಸಿಬ್ಬಂದಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ತಾಲೂಕ ವೈದ್ಯಾಧಿಕಾರಿಗಳು ಹಾಗೂ ಜಿಲ್ಲಾ ಸಲಹೆಗಾರರು ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಗದಗ ಉಪಸ್ಥಿತರಿದ್ದರು.

## ಜಗದ್ಗುರು ಡಾ. ಗಂಗಾಧರ ರಾಜಯೋಗೀಂದ್ರ ಮಹಾಸ್ವಾಮಿಗಳವರ 23ನೇ ಪುಣ್ಯ ಸ್ಮರಣೋತ್ಸವ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಶ್ರೀ ಜಗದ್ಗುರು ಮೂರುಸಾವಿರಮಠ ಮಹಾಸಂಸ್ಥಾನದ ಮಠಾಧೀಶರಾಗಿದ್ದ ಶ್ರೀ ಮನ್ಮಹಾರಾಜ ನಿರಂಜನ ಜಗದ್ಗುರು ಡಾ. ಗಂಗಾಧರ ರಾಜಯೋಗೀಂದ್ರ ಮಹಾಸ್ವಾಮಿಗಳವರ 23ನೇ ಪುಣ್ಯ ಸ್ಮರಣೋತ್ಸವ ನಿಮಿತ್ತ ಪೂಜ್ಯ ಶ್ರೀ ಡಾ. ಗಂಗಾಧರ ಸ್ವಾಮಿಗಳವರ ಗದ್ದಿಗೆಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿ ಹಾಗೂ ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಮಾಲಾರ್ಪಣೆ ಮಾಡಿ ಗೌರವ ಪೂರ್ವಕವಾಗಿ ಶ್ರದ್ಧಾ ಭಕ್ತಿಯಿಂದ ಭಾವಪೂರ್ಣ ನಮನಗಳನ್ನು ಸಲ್ಲಿಸಲಾಯಿತು. ಸೋಹನ ಸುರೇಶ ಹೊರಕೇರಿ, ಸುಜಯ ಸುರೇಶ ಹೊರಕೇರಿ, ಮೂರುಸಾವಿರಮಠ ಪೂಜಾ ಸಮಿತಿಯ ಮುಖ್ಯಸ್ಥರಾದ ಚನ್ನಬಸಪ್ಪ ಧಾರವಾಡಶೆಟ್ಟರ್, ಸಾಹಿತಿ, ನುಡಿ ಕನ್ನಡ ಬಳಗದ, ಹಿರಿಯರಾದ ವೀರಣ್ಣ ಹೂಲಿ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ,ಮಠದ ಅರ್ಚಕ ಶಶಿಧರ ಹಿರೇಮಠ, ಮುಂತಾದವರು ಭಾಗವಹಿಸಿದ್ದರು.

ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ ಅವರು ಮಾತನಾಡಿ ಡಾ. ಗಂಗಾಧ'ರ ರಾಜಯೋಗೀಂದ್ರ ಮಹಾಸ್ವಾಮಿಗಳವರು ಹುಬ್ಬಳ್ಳಿಯಲ್ಲಿ ಶಾಂತಿ ನೆಲೆಸಲು ಶ್ರೀಗಳು ಮಾಡಿದ ಕಾರ್ಯ ಅಪಾರವಾದದ್ದು. ಸಾಹಿತ್ಯ, ಸಾಮಾಜಿಕ, ಶೈಕ್ಷಣಿಕ ಕ್ಷೇತ್ರಕ್ಕೆ ಸಲ್ಲಿಸಿದ ಸೇವೆಯನ್ನು ಸ್ಮರಿಸಿದರು. ಶ್ರೀಗಳ ಆಶೀರ್ವಾದ ಭಕ್ತರ ಮೇಲೆ ಸದಾವಕಾಲ ಇರಲಿ ಎಂದು ಆಶಯ ವ್ಯಕ್ತಪಡಿಸಿದರು.

# ಮುದ್ದೇಬಿಹಾಳ: ಸರ್ಕಾರಿ ನೀತಿ ಖಂಡಿಸಿ ದಸ್ತು ಬರಹಗಾರರ ಪ್ರತಿಭಟನೆ; ತಹಶೀಲ್ದಾರ್ ಹಾಗೂ ಉಪನೋಂದಣಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಕೆ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಸರ್ಕಾರವು ನೋಂದಣಿ ಇಲಾಖೆಯಲ್ಲಿ ಜಾರಿಗೆ ತಂದಿರುವ 'ಪೇಪರ್‌ಲೆಸ್' (ಕಾಗದ ರಹಿತ) ನೋಂದಣಿ ವ್ಯವಸ್ಥೆಯನ್ನು ಸಂಪೂರ್ಣವಾಗಿ ಹಿಂಪಡೆಯಬೇಕೆಂದು ಆಗ್ರಹಿಸಿ ರಾಜ್ಯ ಸಂಘದ ಕರೆಯ ಮೇರೆಗೆ ಬುಧವಾರ ಮುದ್ದೇಬಿಹಾಳ ತಾಲ್ಲೂಕಾ ದಸ್ತು ಬರಹಗಾರರ ಟ್ರಸ್ಟ್ ವತಿಯಿಂದ ಕಚೇರಿ ಕೆಲಸ ಸ್ಥಗಿತಗೊಳಿಸಿ ಬೃಹತ್ ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದು ಟ್ರಸ್ಟ್‌ನ ತಾಲ್ಲೂಕಾಧ್ಯಕ್ಷ ಎಚ್.ಆರ್. ಬಾಗವಾನ ಹಾಗೂ ಪ್ರಧಾನ ಕಾರ್ಯದರ್ಶಿ ಡಿ.ಎಚ್. ತೊಗರಿ ತಿಳಿಸಿದ್ದಾರೆ.

**ಜಿಲ್ಲೆಯಾದ್ಯಂತ ಏಕಕಾಲಕ್ಕೆ ಪ್ರತಿಭಟನೆ:** ಈ ಕುರಿತು ಮಾಹಿತಿ ನೀಡಿರುವ ಟ್ರಸ್ಟಿನ ಜಿಲ್ಲಾ ಸಂಘಟಕ ರಾಜು ಜೋಳದ, "ವಿಜಯಪುರ ಜಿಲ್ಲೆಯಾದ್ಯಂತ ಏಕಕಾಲದಲ್ಲಿ ಎಲ್ಲ ತಾಲ್ಲೂಕು ಘಟಕಗಳಿಂದ ಈ ಕೆಲಸ ಸ್ಥಗಿತ ಹೋರಾಟವನ್ನು ಕೈಗೊಳ್ಳಲಾಗಿದೆ. ಪೇಪರ್‌ಲೆಸ್ ವ್ಯವಸ್ಥೆಯಿಂದಾಗಿ ದಸ್ತು ಬರಹಗಾರರ ಬದುಕಿಗೆ ತೊಂದರೆಯಾಗಲಿದ್ದು, ವ್ಯವಸ್ಥೆಯನ್ನು ಮೊದಲಿನಂತೆಯೇ ಮುಂದುವರಿಸಬೇಕು. ಇಂದು ನೋಂದಣಿ ಕಾರ್ಯ ಸಂಪೂರ್ಣ ಸ್ಥಗಿತಗೊಳ್ಳುವುದರಿಂದ ಸಾರ್ವಜನಿಕರು ಸಹಕರಿಸಬೇಕು" ಎಂದು ವಿನಂತಿಸಿದ್ದಾರೆ.

**ಮುಖ್ಯಮಂತ್ರಿಗಳಿಗೆ ತಹಶೀಲ್ದಾರ್ ಮೂಲಕ ಮನವಿ:** ಟ್ರಸ್ಟ್‌ನ ಉಪಾಧ್ಯಕ್ಷ ರಾಜು ಪಾವಲೆ ಮಾತನಾಡಿ, "ಮುಂಜಾನೆ ಟ್ರಸ್ಟ್‌ನ ಪದಾಧಿಕಾರಿಗಳ ನಿಯೋಗವು ಮುದ್ದೇಬಿಹಾಳ ತಹಶೀಲ್ದಾರ್ ಕೀರ್ತಿ ಚಾಲಕ್ ಅವರ ಮುಖಾಂತರ ಮಾನ್ಯ ಮುಖ್ಯಮಂತ್ರಿಗಳಿಗೆ ಪೇಪರ್‌ಲೆಸ್ ನೋಂದಣಿ ವ್ಯವಸ್ಥೆಯನ್ನು ಕೈಬಿಡುವಂತೆ ಆಗ್ರಹಿಸಿ ಅಧಿಕೃತ ಮನವಿ ಪತ್ರವನ್ನು ಸಲ್ಲಿಸಲಿದೆ ಎಂದು ಜಂಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಉಪನೋಂದಣಾಧಿಕಾರಿಗಳ ಕಚೇರಿ ಸುಧಾರಣೆಗೂ ಒತ್ತಾಯ:** ಇದೇ ಸಂದರ್ಭದಲ್ಲಿ ಉಪನೋಂದಣಾಧಿಕಾರಿಗಳ (ಸಬ್ ರಿಜಿಸ್ಟ್ರಾರ್) ಕಚೇರಿಯ ಕಾರ್ಯವೈಖರಿ ಸುಧಾರಣೆ, ಆಸ್ತಿ ನೋಂದಣಿ ಹಾಗೂ ಮುಟೇಶನ್ ಪ್ರಕ್ರಿಯೆಗಳಲ್ಲಿ ಸಾರ್ವಜನಿಕರಿಗೆ ಆಗುತ್ತಿರುವ ವಿಳಂಬ ನೀತಿಯನ್ನು ಸರಿಪಡಿಸಬೇಕು. ಕಚೇರಿಯಲ್ಲಿ ಮೂಲ ಸೌಕರ್ಯಗಳನ್ನು ಕಲ್ಪಿಸಿ ಪಾರದರ್ಶಕತೆ ಕಾಯ್ದುಕೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿಯೋಗವು ಒತ್ತಾಯಿಸಲಿದೆ.

ಈ ಬೃಹತ್ ಹೋರಾಟ ಮತ್ತು ಮನವಿ ಸಲ್ಲಿಕೆಯ ಸಂದರ್ಭದಲ್ಲಿ ಸಂಘದ ಪ್ರಮುಖ ಸದಸ್ಯರಾದ ಎಚ್.ಎಸ್. ನಾಯ್ಕೋಡಿ, ಡಿ.ಎಸ್. ಹಿರೇಮಠ, ಎಸ್.ಬಿ. ಕಡಿ, ಸಲೀಮ ಮುಲ್ಲಾ, ಆರ್.ಎ. ನಾಡ ಗೌಡ, ಆರ್.ಎಸ್. ಶಂಕಿನ, ಎಮ್.ಎಮ್. ಕಟಗಿ ಸೇರಿದಂತೆ ತಾಲ್ಲೂಕಿನ ದಸ್ತು ಬರಹಗಾರರು, ರೈತ ಮುಖಂಡರು ಹಾಗೂ ಸಾರ್ವಜನಿಕರು ಭಾಗವಹಿಸಲಿದ್ದಾರೆ.

# ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026 ರ ಕುರಿತು ಸಭೆ



**ಬೆಳಗಾವಿ ವಾರ್ತೆ ಗದಗ:** ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತಂತೆ ಪಾರದರ್ಶಕ ಮತದಾರರ ಪಟ್ಟಿ ತಯಾರಿಕೆಗೆ ಬಿ.ಎಲ್.ಓಗಳ ಪಾತ್ರ ಪ್ರಮುಖವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಬುಧವಾರ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ –2026 ರ ಮ್ಯಾಪಿಂಗ್ ಕುರಿತು ಜರುಗಿದ ಸಭೆಯಲ್ಲಿ ಮಾತನಾಡಿದರು. ಭಾರತ ಚುನಾವಣಾ ಆಯೋಗವು ಕರ್ನಾಟಕ ರಾಜ್ಯದಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026 ಕುರಿತು ದಿ:14–5–2026 ರಂದು ವೇಳಾ ಪಟ್ಟಿ ಪ್ರಕಟಿಸಿದೆ. ಇಅಖ ಓಜಣ ತಂತ್ರಾಂಶದಲ್ಲಿ ಮತದಾರ ಪಟ್ಟಿ ದತ್ತಾಂಶವು 16–6–2026 ರಂದು ಫ್ರೀಜ್ ಆಗುವುದರಿಂದ ಜಿಲ್ಲೆಗೆ ಸಂಬಂಧಿಸಿದ 2002 ರ ಮತದಾರರ ಪಟ್ಟಿಗೆ 2025 ರ ಮತದಾರರ ಪಟ್ಟಿಯ ಮ್ಯಾಪಿಂಗ್ ಕಾರ್ಯವನ್ನು ಪೂರ್ಣಗೊಳಿಸಬೇಕಾಗಿರುತ್ತದೆ. ಈ ನಿಟ್ಟಿನಲ್ಲಿ ಬಿ.ಎಲ್.ಓಗಳು ವಿಶೇಷ ಜವಾಬ್ದಾರಿಯಿಂದ ಕೆಲಸ ನಿರ್ವಹಿಸಬೇಕು. ಮತದಾರರ ಪಟ್ಟಿ ಪರಿಷ್ಕರಣೆ ಸಂಬಂಧಿಸಿದಂತೆ ಮನೆ ಮನೆಗೆ ಭೇಟಿ ನೀಡಿ ಸಮಗ್ರ ವಿಷಯಗಳ ಪರಿಶೀಲನೆ ನಡೆಸಬೇಕು. ಸ್ಥಳಾಂತರಗೊಂಡ, ಮರಣ ಹೊಂದಿದ ಮತದಾರರ ಹೆಸರುಗಳ ಕಡೆ ವಿಶೇಷ ಗಮನ ಹರಿಸಬೇಕು. ಸಾಹಿತಿ, ಕ್ರೀಡಾಪಟು, ಪ್ರಶಸ್ತಿ ವಿಜೇತರು, ಎಂ.ಪಿ, ಎಂ.ಎಲ್, ಎ, ತಾ.ಪಂ. ಮಾಜಿ ಅಧ್ಯಕ್ಷ, ಗ್ರಾ.ಪಂ. ಸದಸ್ಯರು ಹೀಗೆ ವಿಐಪಿ ಹಾಗೂ ವಿವಿಐಪಿ ಮತದಾರರ ಹೆಸರು ಮತದಾರರ ಪಟ್ಟಿಯಿಂದ ಬಿಟ್ಟು ಹೋಗಬಾರದು. ಈ ಕಾರ್ಯದಲ್ಲಿ ಯಾವುದೇ ಲೋಪದೋಷಗಳಾಗದಂತೆ ಎಚ್ಚರಿಕೆಯಿಂದ ಕೆಲಸ ಮಾಡಬೇಕು ಮತ್ತು ಬಿ.ಎಲ್.ಏ ಗಳೊಂದಿಗೆ ಸಹಕರಿಸಿಕೊಂಡು ಕಾರ್ಯನಿರ್ವಹಿಸಬೇಕು ಎಂದರು.

ಆಯಾ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬಾಕಿ ಉಳಿದಿರುವ ಮ್ಯಾಪಿಂಗ್ ಕಾರ್ಯವನ್ನು ಶೀಘ್ರ ಪೂರ್ಣಗೊಳಿಸಬೇಕು. ಜಿಲ್ಲೆಯ ಮತದಾರರ ಪಟ್ಟಿ ಸಮಗ್ರ ಪರಿಷ್ಕಣೆ ಯಶಸ್ವಿಗೊಳಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ತಿಳಿಸಿದರು.

ಇದೇ ಸಂದರ್ಭದಲ್ಲಿ ಚುನಾವಣಾ ತಹಶೀಲ್ದಾರರಾದ ಸಂತೋಷ ಹಿರೇಮಠ ಹಾಗೂ ಜಿಲ್ಲಾ ಮಟ್ಟದ ಮಾಸ್ಟರ್ ತರಬೇತುದಾರರಾದ ಬಿ.ಜಿ.ಗಿರಿತಮ್ಮಣ್ಣವರ ಮಾತನಾಡಿ ಬಿ.ಎಲ್.ಓಗಳು ಜಿಲ್ಲೆಯ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ನಿರ್ವಹಿಸಬೇಕಾದ ಕರ್ತವ್ಯಗಳ ವಿವರಿಸಿದರು. ಆರೋಗ್ಯಯುತ ಮತದಾರರ ಪಟ್ಟಿ ತಯಾರಿಕೆಯಲ್ಲಿ ಬಿ.ಎಲ್.ಓಗಳ ಪಾತ್ರ ಪ್ರಮುಖವಾಗಿದೆ. ಬಿ.ಎಲ್.ಓಗಳು ತಮ್ಮ ಮತಗಟ್ಟೆಯ ವ್ಯಾಪ್ತಿಯ ಮನೆ ಮನೆಗೆ ತೆರಳಿ ಮತದಾರರೊಂದಿಗೆ ವಿನಮ್ರತೆಯಿಂದ ವರ್ತಿಸಿ ಮಾಹಿತಿ ಪಡೆದುಕೊಳ್ಳಬೇಕು.

ಈ ಸಂದರ್ಭದಲ್ಲಿ ಮತದಾರರ ನೊಂದಣಾಧಿಕಾರಿಗಳಾದ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕ ಎಸ್.ಡಿ.ಪಾಟೀಲ, ಜಿಲ್ಲೆಯ ಎಲ್ಲ ಸಹಾಯಕ ಮತದಾರರ ನೊಂದಣಾಧಿಕಾರಿಗಳು ಹಾಗೂ ತಹಶೀಲ್ದಾರರು, ಬಿ.ಎಲ್.ಓಗಳು ಹಾಗೂ ಬಿ.ಎಲ್.ಓ ಮೇಲ್ವಿಚಾರಕರು ಹಾಜರಿದ್ದರು.

# ಬಗರ್ ಹುಕುಂ ಮತ್ತು ಹುಲ್ಲುಗಾವಲು ಜಮೀನುಗಳ ಹಕ್ಕುಪತ್ರ ಕುರಿತು ಜನಜಾಗೃತಿ ಸಭೆ

**ಬೆಳಗಾವಿ ವಾರ್ತೆ ಶಿರಹಟ್ಟಿ:** ಅರಣ್ಯ ಭೂಮಿ, ಬಗರ್ ಹುಕುಂ ಮತ್ತು ಹುಲ್ಲುಗಾವಲು ಜಮೀನುಗಳ ಹಕ್ಕುಪತ್ರ ಪಡೆಯುವ ಕುರಿತು ಉತ್ತರ ಕರ್ನಾಟಕ ಮಹಾಸಭಾದ ರಾಜ್ಯಾಧ್ಯಕ್ಷ ಮತ್ತು ವಕೀಲರಾದ ರವಿಕಾಂತ್ ಅಂಗಡಿ ಅವರು ಶಿರಹಟ್ಟಿ ತಾಲೂಕಿನ ಜಲ್ಲಿಗೇರಿಯಲ್ಲಿ ಜನಜಾಗೃತಿ ಸಭೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಹಲವು ತಲೆಮಾರುಗಳಿಂದ ಉಳುಮೆ ಮಾಡಿಕೊಂಡು ಬಂದಿರುವ ರೈತರಿಗೆ ಜಮೀನುಗಳ ಹಕ್ಕುಪತ್ರ ದೊರಕುವ ಭರವಸೆ ಹೆಚ್ಚಾಗಿದೆ ಎಂದು ತಿಳಿಸಿದರು. ಉತ್ತರ ಕರ್ನಾಟಕ ಮಹಾಸಭಾ ನಡೆಸಿದ ನಿರಂತರ ಹೋರಾಟದ ಫಲವಾಗಿ ಸರ್ಕಾರ ಇದೀಗ ಹಳೆಯ ಅರ್ಜಿಗಳ ಪುನರ್ ಪರಿಶೀಲನೆ ನಡೆಸುವುದರ ಜೊತೆಗೆ ಹೊಸ ಅರ್ಜಿಗಳನ್ನು ಸಹ ಸ್ವೀಕರಿಸಲು ಮುಂದಾಗಿದೆ ಎಂದು ಹೇಳಿದರು.

ಈ ಕುರಿತು ತಾಲೂಕು ಆಡಳಿತ ಮತ್ತು ಜಿಲ್ಲಾಡಳಿತದ ವತಿಯಿಂದ ಪಿಡಿಓಗಳು ಹಾಗೂ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ವಿಶೇಷ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದ್ದು, ಹಕ್ಕುಪತ್ರ ವಿತರಣೆ ಪ್ರಕ್ರಿಯೆಯನ್ನು ವೇಗಗೊಳಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು. ಜನರು ತಮ್ಮ ಹಕ್ಕುಗಳ ಬಗ್ಗೆ ಅರಿವು ಹೊಂದಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂದು ಅವರು ಮನವಿ ಮಾಡಿದರು.

ಸಭೆಯಲ್ಲಿ ಪರಶುರಮ ಕಟಗಿ, ಶಂಕ್ರಯ್ಯ ಫಕೀರಯ್ಯ ಹೀರೆಮಠ, ಮಂಜುನಾಥ ಕೆಲೂರ, ಈರಣ್ಣ ಚವ್ಹಾಣ, ನಿಂಗಪ್ಪ ಕಡಪಟ್ಟಿ, ಶೇಖಪ್ಪ ಲಮಾಣಿ, ಈರಪ್ಪ ಹುಬ್ಬಳ್ಳಿ, ಗೌಸ್‌ಮಾದ್ದೀನ್ ಬಸ್ತಿ, ಮಂಜು ಅರಪಲ್ಲಿ, ನಾಮದೇವ ಮಾಂಡ್ರೆ ಮತ್ತು ಗ್ರಾಮಸ್ಥರು, ರೈತರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.



ತಲೆತಲೆಮಾರುಗಳಿಂದ ಉಳುಮೆ ಮಾಡಿಕೊಂಡು ಬಂದಿರುವ ರೈತರಿಗೆ ನ್ಯಾಯ ಸಿಗಬೇಕು. ಬಗರ್ ಹುಕುಂ ಮತ್ತು ಹುಲ್ಲುಗಾವಲು ಜಮೀನುಗಳ ಹಕ್ಕುಪತ್ರಕ್ಕಾಗಿ ಉತ್ತರ ಕರ್ನಾಟಕ ಮಹಾಸಭಾ ನಿರಂತರ ಹೋರಾಟ ನಡೆಸಿದ್ದು, ಅದರ ಫಲವಾಗಿ ಸರ್ಕಾರ ಈಗ ಅರ್ಜಿಗಳ ಪುನರ್ ಪರಿಶೀಲನೆ ಹಾಗೂ ಹೊಸ ಅರ್ಜಿಗಳ ಸ್ವೀಕಾರಕ್ಕೆ ಮುಂದಾಗಿದೆ. ಜನರು ತಮ್ಮ ಹಕ್ಕುಗಳಿಗಾಗಿ ಜಾಗೃತರಾಗಬೇಕು.

**–ರವಿಕಾಂತ್ ಅಂಗಡಿ,**
**ವಕೀಲರು ಮತ್ತು ಉತ್ತರ ಕರ್ನಾಟಕ ಮಹಾಸಭಾ ರಾಜ್ಯಾಧ್ಯಕ್ಷ**

# ಶಾಲೆ, ಅಂಗನವಾಡಿಗಳಲ್ಲಿನ ಮೂಲಸೌಕರ್ಯ ಪರಿಶೀಲಿಸಿ



**ಬೆಳಗಾವಿ ವಾರ್ತೆ ಬೆಳಗಾವಿ:** ಶಾಲೆ ಹಾಗೂ ಅಂಗನವಾಡಿಗಳು ಮರುಆರಂಭವಾಗುತ್ತಿರುವುದರಿಂದ ಜಿಲ್ಲೆಯ ಎಲ್ಲ ಶಾಲೆ ಹಾಗೂ ಅಂಗನವಾಡಿಗಳ ಮೂಲಕಸೌಕರ್ಯಗಳನ್ನು ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲಿಸಿ, ಅಗತ್ಯ ಸೌಕರ್ಯ ಕಲ್ಪಿಸ ಬೇಕು ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಸೂಚನೆ ನೀಡಿದರು.

ಇಲ್ಲಿನ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಶಾಲೆ ಹಾಗೂ ಅಂಗನವಾಡಿಗಳ ಪ್ರಾರಂಭೋತ್ಸವದ ಕುರಿತು ಹಮ್ಮಿಕೊಂಡಿದ್ದ ವಿವಿಧ ಇಲಾಖೆಯ ಜಿಲ್ಲಾ ಹಾಗೂ ತಾಲೂಕುಮಟ್ಟದ ಅಧಿಕಾರಿಗಳ ವಿಡಿಯೋ ಸಂವಾದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಾಲೆ ಹಾಗೂ ಅಂಗನವಾಡಿಗಳ ಒಳ ಹಾಗೂ ಹೊರಭಾಗದಲ್ಲಿ ಸ್ವಚ್ಛತೆ ಕೈಗೊಳ್ಳಲು ಆದ್ಯತೆ ನೀಡಬೇಕು. ಆಹಾರ ಪದಾರ್ಥಗಳ ದಾಸ್ತಾನು ಕೊಠಡಿಯನ್ನು ಶುಚಿಯಾಗಿಟ್ಟು ಕೊಳ್ಳಬೇಕು. ಆಹಾರ ಪದಾರ್ಥಗಳ ಗುಣಮಟ್ಟವನ್ನು ಪರಿಶೀಲಿಸಬೇಕು. ಕುಡಿಯುವ ನೀರು, ವಿದ್ಯುತ್ ಸೇರಿ ಇನ್ನಿತರೇ ಮೂಲಸೌಕರ್ಯಗಳನ್ನು ಒದಗಿಸಬೇಕು ಎಂದು ಸೂಚನೆ ನೀಡಿದರು.

**ಕಟ್ಟಡಗಳ ಸ್ಥಿತಿಗತಿ ಪರಿಶೀಲಿಸಿ:**

ಎಲ್ಲ ಗ್ರಾಪಂ, ಸ್ಥಳೀಯ ಸಂಸ್ಥೆಗಳು ಹಾಗೂ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿನ ಶಾಲೆ ಹಾಗೂ ಅಂಗನವಾಡಿ ಕಟ್ಟಡಗಳ ಸ್ಥಿತಿಗತಿಯ ನ್ನು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಮಳೆಗಾಲ ಆರಂಭಕ್ಕೂ ಮೊದಲೇ ಪರಿಶೀಲಿಸಿ ಅಗತ್ಯಬಿದ್ದರೆ ಬೇರೆ ಕಟ್ಟಡಗಳಲ್ಲಿ ಸ್ಥಳಾಂತರಕ್ಕೆ ಕ್ರಮ ವಹಿಸಬೇಕು. ಮಕ್ಕಳ ಸುರಕ್ಷತೆಗೆ ಆದ್ಯತೆ ನೀಡಬೇಕು ಎಂದು ನಿರ್ದೇಶನ ನೀಡಿದರು.

ಶಾಲೆ ಹಾಗೂ ಅಂಗನವಾಡಿಗಳಿಗೆ ಪೂರೈಕೆಯಾಗುವ ಕುಡಿಯುವ ನೀರನ್ನು ಎಫ್.ಟಿ.ಕೆ. ಕಿಟ್ ಮೂಲಕ ಪರಿಶೀಲಿಸಿ ನಂತರ ಪೂರೈಕೆ ಮಾಡಬೇಕು. ಶಾಲೆಗಳ ಸುತ್ತಮುತ್ತ ಅಪಾಯಕಾರಿ ವಿದ್ಯುತ್ ತಂತಿ, ವಿದ್ಯು ತ್ ದೀಪ ಇತ್ಯಾದಿಗಳನ್ನು ಬೇರೆಡೆ ಸ್ಥಳಾಂತರಿಸುವಂತೆ ತಿಳಿಸಿದರು.

ಮಕ್ಕಳ ಹಾಜರಾತಿಗೆ ಕ್ರಮವಹಿಸಿ:

ಜೂನ್–1 ರಂದು ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮವನ್ನು ಎಲ್ಲ ಶಾಲೆಗಳಲ್ಲಿ ಸಂಭ್ರಮದಿಂದ ಆಚರಿಸಬೇಕು. ಯಾವ ಮಕ್ಕಳು ಕೂಡ ಶಾಲೆಯಿಂದ ಹೊರಗುಳಿಯದಂತೆ ಕ್ರಮವಹಿಸಬೇಕು. ಶಾಲೆಯಿಂದ ಹೊರಗುಳಿದ ಮಕ್ಕಳ ಮನವೊಲಿಸಿ ಶಾಲೆಗೆ ಕರೆತರುವ ಕಾರ್ಯ ಮಾಡಬೇಕು. ಅಂಗನವಾಡಿಗಳಲ್ಲಿ ತಿಂಗಳ ಮೂರನೇ ಶನಿವಾರ ಹಾಗೂ ಶಾಲೆಗಳಲ್ಲಿ ತಿಂಗಳ 4ನೇ ಶನಿವಾರ ಕಡ್ಡಾಯವಾಗಿ ಪಾಲಕರ ಸಭೆ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಜಿಪಂ ಯೋಜನಾ ನಿರ್ದೇಶಕ ರವಿ ಬಂಗಾರೆಪ್ಪನವರ್, ಉಪ ಕಾರ್ಯದರ್ಶಿ (ಅಭಿವೃದ್ಧಿ) ಬಸವರಾಜ ಅಡವಿಮಠ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ ಕಲಾದಗಿ ಸೇರಿ ವಿವಿಧ ಇಲಾಖೆಯ ಜಿಲ್ಲಾ ಹಾಗೂ ತಾಲೂಕುಮಟ್ಟದ ಅಧಿಕಾರಿಗಳು, ಸಿಬ್ಬಂದಿ ಹಾಜರಿದ್ದರು.

# ಅತ್ಯಂತ ಕಡಿಮೆ ಹಾಗೂ ಶೂನ್ಯ ಫಲಿತಾಂಶ ಸಾಧಿಸುವ ಶಾಲೆಗಳ ಮಕ್ಕಳನ್ನು ಸಮೀಪದ ಸರ್ಕಾರಿ ಶಾಲೆಗೆ ಸೇರಿಸಿ; ಯಾವುದೇ ಸರ್ಕಾರಿ ಶಾಲೆಗಳ ವಿಲೀನವಿಲ್ಲ; ಸರ್ಕಾರಿ ಶಾಲೆಗಳನ್ನು ಬಲಪಡಿಸಲು ಸಮುದಾಯ ಪಾಲ್ಗೊಳುವಿಕೆ ಹೆಚ್ಚಿಸಿ

**ಬೆಳಗಾವಿ ವಾರ್ತೆ ಧಾರವಾಡ:** ಕಡಿಮೆ ಫಲಿತಾಂಶದ ಶಾಲೆಗಳಿಗೆ ಪಾಲಕರು ತಮ್ಮ ಮಕ್ಕಳನ್ನು ದಾಖಲು ಮಾಡಲು ಇಚ್ಚಿಸುವುದಿಲ್ಲ. ಅಂತಹ ಶಾಲೆಗಳನ್ನು ನಡೆಸುವುದರಿಂದ ಯಾವ ಪ್ರಯೋಜನವೂ ಇಲ್ಲ. ಆದ್ದರಿಂದ ಪಾಲಕರಿಗೆ ಸಮೀಪದ ಸರ್ಕಾರಿ ಶಾಲೆಗಳಿಗೆ ತಮ್ಮ ಮಕ್ಕಳ ದಾಖಲಾತಿ ಮಾಡಲು ಮನವಲಿಸಲು ಶಿಕ್ಷಕರು ಪ್ರಯತ್ನಿಸಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಹೇಳಿದರು.

ಅವರು ಇತ್ತೀಚಿಗೆ (ಮೇ.23) ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳ ಮತ್ತು ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರ ಸಭೆ ಜರುಗಿಸಿ, 2025–26 ನೇ ಸಾಲಿನ ಎಸ್.ಎಸ್.ಎಲ್.ಸಿ ಫಲಿತಾಂಶ ವಿಶ್ಲೇಷಣೆ ಮಾಡಿ, 2026–27 ನೇ ಸಾಲಿಗೆ ಜಿಲ್ಲೆಯ ಫಲಿತಾಂಶ ಆಧರಿಸಿ ಶಾಲಾ ಚಟುವಟಿಕೆಗಳನ್ನು ಇನ್ನಷ್ಟು ಉತ್ತಮವಾಗಿ ನಿರ್ವಹಿಸುವ ಕುರಿತು ಪ್ರಗತಿ ಪರಿಶೀಲನಾ ಮಾಡಿ, ಮಾತನಾಡಿದರು.

ಸರ್ಕಾರಿ ಶಾಲೆಗಳಲ್ಲಿ ಸದೃಢಗೊಳಿಸುವ ಮತ್ತು ಸಾಮುದಾಯಿಕ ಪಾಲ್ಗೋಳುವಿಕೆಯಲ್ಲಿ ಕ್ರಿಯಾಶೀಲತೆಯ ನ್ನು ಅಳವಡಿಸಿಕೊಳ್ಳುವ ಕ್ರಮವಾಗಬೇಕು. ನಿರಂತರವಾಗಿ ಪಾಲಕರ ಸಭೆ ಜರುಗಿಸಬೇಕು. ಕಡಿಮೆ ಫಲಿತಾಂಶ ಮಾಡುವ ಖಾಸಗಿ ಹಾಗೂ ಇತರ ಶಾಲೆಗಳ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲಿಸುವ ಮೂಲಕ ಸರ್ಕಾರಿ ಶಾಲೆಗಳನ್ನು ಬಲಪಡಿಸಬೇಕು. ಯಾವುದೇ ಸರ್ಕಾರಿ ಶಾಲೆಗಳ ವಿಲೀನದ ಪ್ರಕ್ರೀಯೆ ಇರುವುದಿಲ್ಲ ಎಂದು ಅವರು ಹೇಳಿದರು.

2025–26 ನೇ ಸಾಲಿನ ಎಸ್.ಎಸ್.ಎಲ್.ಸಿ ಫಲಿತಾಂಶ ವಿಶ್ಲೇಷಣೆ ಮಾಡಿ, 2026–27 ನೇ ಸಾಲಿಗೆ ಜಿಲ್ಲೆಯ ಫಲಿತಾಂಶ ಆಧರಿಸಿ ಶಾಲಾ ಚಟುವಟಿಕೆಗಳನ್ನು ಇನ್ನಷ್ಟು ಉತ್ತಮವಾಗಿ ನಿರ್ವಹಿಸಲು ಅವರು ಸೂಚಿಸಿದರು.

ಸತತ ಮೂರು ವರ್ಷಗಳಿಂದ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ. 0 ದಿಂದ ಶೇ. 40 ಕ್ಕಿಂತ ಕಡಿಮೆ ಫಲಿತಾಂಶ ಪಡೆದ ಹಾಗೂ ಶೇ. 25 ಕ್ಕಿಂತ ಕಡಿಮೆ ಮಕ್ಕಳ ದಾಖಲಾತಿ ಹೊಂದಿದ ಖಾಸಗಿ ಶಾಲೆಗಳ ಫಲಿತಾಂಶ ಸಹ ಸಭೆಯಲ್ಲಿ ಅವರು ವಿಶ್ಲೇಷಿಸಿದರು.



2025–26 ನೇ ಸಾಲಿನಲ್ಲಿ ಜಿಲ್ಲೆಯ ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣೆಯಾಗಿದ್ದು 18 ನೇ ಸ್ಥಾನದಿಂದ 12ನೇ ಸ್ಥಾನ ಪಡೆದಿದ್ದು, ಸರ್ಕಾರಿ ಶಾಲೆಗಳ ಫಲಿತಾಂಶವು ಉತ್ತಮವಾಗಿದೆ. ಆದ್ದರಿಂದ ಮಕ್ಕಳ ದಾಖಲಾತಿ ಹೆಚ್ಚಿಸಲು ಸೂಕ್ತ ಕ್ರಮಕೈಗೊಳ್ಳಬೇಕು. ಪಾಲಕರಿಗೆ ಸರ್ಕಾರಿ ಶಾಲೆಗಳಿಗೆ ಮಕ್ಕಳನ್ನು ದಾಖಲು ಮಾಡಲು ಶಿಕ್ಷಣ ಇಲಾಖೆಯ ಎಲ್ಲ ಹಂತದ ಅಧಿಕಾರಿಗಳು ಸಮುದಾಯದ ಸಹಕಾರದೊಂದಿಗೆ ಪ್ರಯತ್ನಿಸಬೇಕೆಂದು ಅವರು ತಿಳಿಸಿದರು.

ಗ್ರಾಮೀಣ ಭಾಗದಲ್ಲಿ ಸರ್ಕಾರಿ ಪ್ರೌಢಶಾಲೆಗಳ ಎಸ್.ಎಸ್.ಎಲ್.ಸಿ ಫಲಿತಾಂಶ ಉತ್ತಮವಾಗಿದ್ದು, ಗ್ರಾಮೀಣ ಭಾಗದ ಮಕ್ಕಳಿಗೆ ಆಶಾದಾಯಕವಾಗಿದೆ. ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚಳಕ್ಕೆ ಸರ್ಕಾರ ಹಾಗೂ ಶಿಕ್ಷಣ ಇಲಾಖೆ ನೀಡಿದ ಸುತ್ತೋಲೆಯಂತೆ ಕ್ರಮವಹಿಸಬೇಕು. ಈ ಕಾರ್ಯಕ್ಕೆ ಜಿಲ್ಲಾ ಪಂಚಾಯತ ಸಹಕಾರ ಪಡೆದುಕೊಳ್ಳಲು ಅವರು ಸೂಚಿಸಿದರು.

ತರಗತಿಗಳಲ್ಲಿ ಪುಸ್ತಕದ ಜ್ಞಾನದ ಜೊತೆಗೆ ಮಕ್ಕಳಿಗೆ ವ್ಯವಹಾರ ಜ್ಞಾನ ಹೆಚ್ಚಿಸುವ ಚಟುವಟಿಕೆಗಳನ್ನು ರೂಢಿಸುವುದು ಹಾಗೂ ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ವಿಶೇಷ ಕ್ರಿಯಾಯೋಜನೆ ಮೂಲಕ ಕಲಿಕಾ ಪ್ರಗತಿ ಸಾಧಿಸುವಂತೆ ಮಾಡುವುದು ಪ್ರಸಕ್ತ ವರ್ಷದ ಮುಖ್ಯ ಅಂಶವಾಗಿರಲಿ ಎಂದು ಅಧಿಕಾರಿಗಳಿಗೆ ಅವರು ಸೂಚಿಸಿದರು.

ಎಲ್ಲ ತರಗತಿಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಉತ್ತಮ ಗುರಿ ಸಾಧಿಸುವಂತೆ ಪ್ರತಿ ಶಿಕ್ಷಕರಿಗೂ ಶಾಲಾ ಹಂತದಲ್ಲಿ, ತಾಲೂಕ ಹಂತದಲ್ಲಿ, ಜಿಲ್ಲಾ ಹಂತದಲ್ಲಿ, ಡಯಟ್ ಮಾರ್ಗದರ್ಶನದಲ್ಲಿ ಕ್ರಿಯಾಯೋಜನೆ ಸಿದ್ಧಪಡಿಸಿ, ಜೂನ್ ಆರಂಭದಿಂದಲೇ ಅನುಷ್ಠಾನಗೊಳಿಸಲು ಅವರು ಹೇಳಿದರು.

ಮಕ್ಕಳ ಕಲಿಕೆಯಲ್ಲಿ ಜ್ಞಾನದ ಜೊತೆ ಜೊತೆಗೆ ಮೌಲ್ಯ, ನೀತಿ ಶಿಕ್ಷಣವು ಅಷ್ಟೇ ಮಹತ್ವದ್ದಾಗಿದೆ. ಶಾಲಾ ಚಟುವಟಿಕೆಗಳಲ್ಲಿ ಸನ್ನಡತೆಯನ್ನು ಬೆಳೆಸುವ ಮೌಲ್ಯವನ್ನು ರೂಡಿಸುವ ಚಟುವಟಿಕೆಗಳನ್ನು ಒಳಗೊಂಡ ಕ್ರಿಯಾಯೋಜನೆ ಸಿದ್ಧಪಡಿಸಲು ಸಿಇಓ ಭುವನೇಶ ಪಾಟೀಲ ಅವರು ತಿಳಿಸಿದರು.

ಪ್ರಸ್ತುತ 2026–27 ನೇ ಸಾಲಿನಲ್ಲಿ ಎಸ್.ಸಿ, ಎಸ್.ಟಿ ಹಾಗೂ ಅಲ್ಪಸಂಖ್ಯಾತ ವರ್ಗದ ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯಗಳನ್ನು ಹೆಚ್ಚಿಸುವ ಪ್ರಯತ್ನವನ್ನು ಜೂನ್ ಮೊದಲ ವಾರದಿಂದ ನಿರ್ವಹಿಸಲು ವಿಶೇಷ ಕ್ರಿಯಾಯೋಜನೆ ಸಿದ್ಧಪಡಿಸಬೇಕು. ಹುಬ್ಬಳ್ಳಿ ಶಹರ, ಧಾರವಾಡ ಶಹರ, ಕುಂದಗೋಳ ಹಾಗೂ ನವಲಗುಂದ ತಾಲೂಕಗಳ ಎಸ್.ಎಸ್.ಎಲ್.ಸಿ ಫಲಿತಾಂಶ ಕಡಿಮೆಯಾಗಿದ್ದು, ಸದರಿ ತಾಲೂಕಗಳ ಫಲಿತಾಂಶವನ್ನು ಹಾಗೂ ಶೇ. 60 ಕ್ಕಿಂತ ಕಡಿಮೆ ಫಲಿತಾಂಶ ಹೊಂದಿದ ಎಲ್ಲ ಶಾಲೆಗಳಿಗೆ ಶಿಕ್ಷಣ ಇಲಾಖೆಯ ಅಧಿಕಾರಿಗಳು ಭೇಟಿ ನೀಡಿ, ವಾಸ್ತವ ಸ್ಥಿತಿಯ ವರದಿಯನ್ನು ಸಲ್ಲಿಸಲು ಅವರು ನಿರ್ದೇಶಿಸಿದರು.

2025–26 ನೇ ಸಾಲಿನಲ್ಲಿ ಕಡಿಮೆ ಫಲಿತಾಂಶವನ್ನು ಪಡೆದ ಹುಬ್ಬಳ್ಳಿ ಶಹರ, ಧಾರವಾಡ ಶಹರ, ಕುಂದಗೋಳ ಹಾಗೂ ನವಲಗುಂದ ತಾಲೂಕುಗಳ ಫಲಿತಾಂಶ ಸುಧಾರಣೆಗಾಗಿ ವಿಶೇಷ ಪ್ರಯತ್ನ ಮತ್ತು ಚಟುವಟಿಕೆಗಳನ್ನು ನಿರ್ವಹಿಸಲು ಅವರು ಸೂಚಿಸಿದರು.

ಮಕ್ಕಳನ್ನು ಮೊಬೈಲ್ ಗಿಳಿನಿಂದ ಹೊರ ತರಲು ಹಾಗೂ ಪೋಷಕರೊಂದಿಗೆ ಉತ್ತಮ ಸಂಪರ್ಕ ಸಾಧಿಸಲು ಮಕ್ಕಳ ಕಲಿಕಾ ಪ್ರಗತಿಯ ಬಗ್ಗೆ ಪೋಷಕರಿಗೆ ತಿಳಿಸಿ, ನಿಯಮಿತವಾಗಿ ಪಾಲಕರ ಸಭೆ ಜರುಗಿಸಬೇಕು. ಪ್ರತಿ ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ಬಾಲಕರ ಫಲಿತಾಂಶ ಬಾಲಕಿಯರ ಫಲಿತಾಂಶಕ್ಕಿಂತ ಕಡಿಮೆ ಇರುವುದು ಕಂಡುಬಂದಿದೆ. ಇದರಿಂದಾಗಿ ಬಾಲಕರು ಶಾಲೆಗೆ ನಿಯಮಿತವಾಗಿ ಹಾಜರಾಗುವಂತೆ ಹಾಗೂ ಅಧ್ಯಯನದಲ್ಲಿ ತೊಡಗುವಂತೆ ಮಾಡಲು ಬಾಲಕರಿಗಾಗಿಯೇ ವಿಶೇಷ ಚಟುವಟಿಕೆಗಳನ್ನು ನಿರ್ವಹಿಸಬೇಕೆಂದು ಅವರು ಹೇಳಿದರು.

ಶಾಲೆಗಳು ಜೂನ್ 1 ರಿಂದ ಆರಂಭವಾಗುತ್ತಿದ್ದು, ಶಾಲೆ ಕಟ್ಟಡ ಸುಸ್ಥಿತಿಯಲ್ಲಿರುವಂತೆ ಮುತುರ್ವಜಿ ವಹಿಸುವುದು ಹಾಗೂ ಕಟ್ಟಡವು ಮಳೆ ಹಾನಿಗೆ ಒಳಪಡದಂತೆ ಸೂಕ್ತ ಭದ್ರತೆ ಹಾಗೂ ರಕ್ಷಣೆ ಒದಗಿಸಲು ಸಿವಿಲ್ ಕಾಮಗಾರಿಗಳ ಅಗತ್ಯವಿದ್ದಲ್ಲಿ ಮಾಹಿತಿಯನ್ನು ನೀಡಬೇಕು. ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನ ಕುರಿತು ಜಿಲ್ಲಾ ಹಾಗೂ ತಾಲೂಕ ಮುಖ್ಯಸ್ಥರಿಗೆ ಅವರು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಉಮೇಶ ಬೊಮ್ಮಕ್ಕನವರ ಅವರು ಸ್ವಾಗತಿಸಿ, ಸಭೆ ನಿರ್ವಹಿಸಿದರು.

ವೇದಿಕೆಯಲ್ಲಿ ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಡಯಟ್ ಪ್ರಾಂಶುಪಾಲ ಬಸವರಾಜ ನಾಲ್ವತವಾಡ್ ಇದ್ದರು.

ಸಭೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ರಾಮಕೃಷ್ಣ ಸದಲಗಿ ಸೇರಿದಂತೆ ಎಲ್ಲ ಕ್ಷೇತ್ರ ಶಿಕ್ಷಣಾಧಿಕಾರಿಗಳು, ವಿಷಯ ನಿರೀಕ್ಷಕರು, ಉಪನಿರ್ದೇಶಕರ ಕಚೇರಿಯ ಸಂಯೋಜಕರು ಹಾಗೂ ಸಮನ್ವಯಾಧಿಕಾರಿಗಳು, ಮುಖ್ಯೋಪಾಧ್ಯಾಯರು ಭಾಗವಹಿಸಿದ್ದರು.

# ರೈತರಿಗೆ ಹಾಗೂ ಸೂಕ್ಷ್ಮ ಉದ್ಯಮಿಗಳಿಗೆ ಉತ್ತಮ ಬ್ಯಾಂಕಿಂಗ್ ಸೇವೆ ಒದಗಿಸಬೇಕು. ರೈತರನ್ನು ಯಾವುದೇ ರೀತಿಯಲ್ಲಿ ಕಿರುಕುಳ ನೀಡಬಾರದು: ಜಿಲ್ಲಾಧಿಕಾರಿ ಸ್ನೇಹಲ್ ಆರ್.



**ಬೆಳಗಾವಿ ವಾರ್ತೆ ಧಾರವಾಡ:** ಜಿಲ್ಲೆಯಲ್ಲಿ ಕೃಷಿ ಹಾಗೂ ಕೈಗಾರಿಕೆಗಳಿಗೆ ಪೂರಕವಾದ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ, ಪ್ರೋತ್ಸಾಹಿಸಲು ಜಿಲ್ಲೆಯ ಎಲ್ಲ ಬ್ಯಾಂಕ್‌ಗಳು ಸಹಕರಿಸಬೇಕು. ಸರ್ಕಾರದ ನಿರ್ದೇಶನ ನೀಡಿ, ಹಾಗೂ ಆರ್‌ಬಿಐ ಮಾರ್ಗಸೂಚಿಗಳನ್ನು ಉಲ್ಲಂಘಿಸಿ, ಸಾಲ ವಸೂಲಾತಿಯನ್ನು ಮಾಡಬಾರದೆಂದು ಜಿಲ್ಲಾಧಿಕಾರಿ ಹಾಗೂ ಸಮಿತಿಯ ಸಹ ಅಧ್ಯಕ್ಷರಾಗಿರುವ ಸ್ನೇಹಲ್ ಆರ್. ಅವರು ಹೇಳಿದರು.

ಧಾರವಾಡ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು (ಮೇ.27) ಬೆಳಿಗ್ಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅವರ ಅಧ್ಯಕ್ಷತೆಯಲ್ಲಿ ಹಾಗೂ ಜಿಲ್ಲಾಧಿಕಾರಿ ಅವರ ಸಹಾಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಬ್ಯಾಂಕರ್ಸ್ ಸಮಿತಿ ಹಾಗೂ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಮಿತಿ (ಡಿ.ಎಲ್.ಆರ್.ಸಿ) ಸಭೆ ಜರುಗಿತು. ಸಭೆಯಲ್ಲಿ 2025–26ನೇ ಸಾಲಿನ ವಿವಿಧ ಸಾಲಸಂಬಂಧಿತ ಸರ್ಕಾರಿ ಯೋಜನೆಗಳ ಪ್ರಗತಿ ಹಾಗೂ ಆದ್ಯತಾ ವಲಯ ಸಾಲ ವಿತರಣೆ ಕುರಿತು ಸಮಗ್ರ ಪರಿಶೀಲನೆ ನಡೆಸಲಾಯಿತು.

ಜಿಲ್ಲಾಧಿಕಾರಿ ಹಾಗೂ ಸಮಿತಿಯ ಸಹ ಅಧ್ಯಕ್ಷರಾಗಿರುವ ಸ್ನೇಹಲ್ ಆರ್. ಅವರು ಮಾತನಾಡಿ, ರೈತರು ಹಾಗೂ ಸ್ವಯಂ ಉದ್ಯೋಗಿಗಳು ಸಾಲ ವಸೂಲಾತಿಯಲ್ಲಿ ತಾರತಮ್ಯ ಮಾಡುತ್ತಿದ್ದು, ಸರ್ಕಾರದಿಂದ ಸಿಗುವ ಸಬ್ಸಿಡಿ ಹಣವನ್ನು ಸಾಲದ ಮೊತ್ತಕ್ಕೆ ಹೊಂದಾಣಿಕೆ ಮಾಡಲಾಗುತ್ತಿದೆ ಎಂದು ಅನೇಕರು ದೂರು ನೀಡುತ್ತಿದ್ದಾರೆ. ಈ ಕುರಿತು ಸರ್ಕಾರದ ನಿರ್ದೇಶನಗಳನ್ನು ಪಾಲಿಸಬೇಕು. ಸಹಾಯಧನದ ಹಣವನ್ನು ಯಾವುದೇ ಕಾರಣಕ್ಕೂ ಸಾಲಕ್ಕೆ ಹೊಂದಾಣಿಕೆ ಮಾಡಬಾರದು ಎಂದು ಜಿಲ್ಲಾಧಿಕಾರಿಗಳು ಬ್ಯಾಂಕ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸರ್ಕಾರ ಹಲವು ಬ್ಯಾಂಕುಗಳನ್ನು ಸ್ಥಾಪಿಸಿರುವ ಉದ್ದೇಶ ಜನರಿಗೆ ನೆರವಾಗುವುದು ಮತ್ತು ಉದ್ಯಮ ಚಟುವಟಿಕೆಗಳನ್ನು ಪ್ರೋತ್ಸಾಹಿಸುವುದಾಗಿದೆ. ರೈತರಿಗೆ ಹಾಗೂ ಸಣ್ಣ ಉದ್ಯಮಿಗಳಿಗೆ ತೊಂದರೆಯಾಗದಂತೆ ಬ್ಯಾಂಕ್ ಅಧಿಕಾರಿಗಳು ಕ್ರಮ ವಹಿಸಬೇಕೆಂದು ಅವರು ತಿಳಿಸಿದರು.

ಬ್ಯಾಂಕ್‌ಗಳು ಗ್ರಾಮ ಪಂಚಾಯತಿ ಹಾಗೂ ಗ್ರಾಮ ಮಟ್ಟದಲ್ಲಿ ಸಭೆಗಳನ್ನು ಆಯೋಜಿಸಿ, ರೈತರಿಗೆ ಸಾಲ ಮರುಪಾವತಿ ಕುರಿತು ಜಾಗೃತಿ ಮೂಡಿಸಬೇಕು. ಸಾಲ ಮನ್ನಾ ಆಗುವ ನಿರೀಕ್ಷೆಯಲ್ಲಿ ಕಾಯದೆ ಸಾಧ್ಯವಾದಷ್ಟು ಸಾಲ ತೀರಿಸುವಂತೆ ಪ್ರೇರೆಪಿಸಬೇಕು ಎಂದು ಅವರು ಹೇಳಿದರು.

ಪ್ರಧಾನಮಂತ್ರಿ ಉದ್ಯೋಗ ಸೃಜನ ಕಾರ್ಯಕ್ರಮ (ಪಿಎಮ್‌ಇಜಿಪಿ) ಯೋಜನೆಯಡಿ ಇನ್ನೂ 142 ಅರ್ಜಿಗಳು ಬ್ಯಾಂಕುಗಳಲ್ಲಿ ಬಾಕಿ ಇವೆ. ಸಂಬಂಧಿತ ಬ್ಯಾಂಕುಗಳು ಅವುಗಳನ್ನು ಆದ್ಯತೆಯ ಮೇರೆಗೆ ತಕ್ಷಣ ವಿಲೇವಾರಿ ಮಾಡಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ರೈತರಿಗೆ ಹಾಗೂ ಸೂಕ್ಷ್ಮ ಉದ್ಯಮಿಗಳಿಗೆ ಉತ್ತಮ ಬ್ಯಾಂಕಿಂಗ್ ಸೇವೆ ಒದಗಿಸಬೇಕು. ರೈತರನ್ನು ಯಾವುದೇ ರೀತಿಯಲ್ಲಿ ಕಿರುಕುಳ ನೀಡಬಾರದು. ಇಲ್ಲವಾದಲ್ಲಿ ಅವರು ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಮೇಲೆ ಅವಲಂಬಿತರಾಗುವ ಪರಿಸ್ಥಿತಿ ಉಂಟಾಗುತ್ತದೆ ಎಂದು ಬ್ಯಾಂಕುಗಳಿಗೆ ಎಚ್ಚರಿಕೆ ನೀಡಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಮಾತನಾಡಿ, ಸಾರ್ವಜನಿಕರು ಸಾಲ ಪಡೆಯಲು ಅರ್ಜಿಗಳನ್ನು ಸಲ್ಲಿಸಿದಾಗ ಬ್ಯಾಂಕುಗಳು ಸರಿಯಾಗಿ ಸ್ಪಂದಿಸಿ, ಶೀಘ್ರಗತಿಯಲ್ಲಿ ಸಾಲ ಮಂಜೂರಾತಿಗೆ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಸಾಲ ಮಂಜೂರಾತಿಯಲ್ಲಿ ಅನಗತ್ಯ ವಿಳಂಬವಾದರೆ, ಜನರು ಖಾಸಗಿ ಫೈನಾನ್ಸ್ ಸಂಸ್ಥೆಗಳ ಮೊರೆ ಹೋಗುವ ಸಾಧ್ಯತೆ ಇರುತ್ತದೆ. ಆದ್ದರಿಂದ ಬ್ಯಾಂಕುಗಳು ಸಾರ್ವಜನಿಕರಿಗೆ ಅನುಕೂಲಕರವಾಗಿ ಸ್ಪಂದಿಸಿ, ಕಾರ್ಯನಿರ್ವಹಿಸಬೇಕು ಎಂದು ಅವರು ತಿಳಿಸಿದರು.

ಚಿಕ್ಕ ಉದ್ಯಮಿಗಳಿಗೆ ಸಾಲ ಮಂಜೂರಾತಿಯಲ್ಲಿ ಯಾವುದೇ ರೀತಿಯ ವಿಳಂಬವಾಗಬಾರದು. ಸಣ್ಣ ಸಣ್ಣ ಕಾರಣಗಳಿಗೆ ಜನರನ್ನು ಅಲೆದಾಡಿಸದೇ, ಕಡಿಮೆ ಅವಧಿಯಲ್ಲಿ ಅರ್ಜಿಗಳನ್ನು ವಿಲೇವಾರಿ ಮಾಡಿ ಸಾಲ ಮಂಜೂರು ಮಾಡಬೇಕು ಎಂದು ಅವರು ಸೂಚಿಸಿದರು.

ಉದ್ಯೋಗಿನಿ ಸೇರಿದಂತೆ ವಿವಿಧ ಯೋಜನೆಗಳ ಅಡಿಯಲ್ಲಿ ಅರ್ಜಿ ಸಲ್ಲಿಸಿದ ಫಲಾನುಭವಿಗಳಿಗೆ ಬ್ಯಾಂಕುಗಳು ಸಮಯಕ್ಕೆ ಸರಿಯಾಗಿ ಸಾಲ ನೀಡಬೇಕು. ಸಬ್ಸಿಡಿ ಹಣ ಬರುವವರೆಗೆ ಕಾಯಬಾರದು. ವಾಹನ ಸಬ್ಸಿಡಿ ಯೋಜನೆಗಳನ್ನು ಹೊರತುಪಡಿಸಿ, ಬ್ಯಾಂಕುಗಳು ಮಂಜೂರಾದ ಸಾಲದ ಮೊತ್ತವನ್ನು ಮೊದಲು ಬಿಡುಗಡೆ ಮಾಡಬೇಕು. ಸರಕಾರಿ ಯೋಜನೆಗಳ ಅಡಿಯಲ್ಲಿ ಸಾಲ ಪಡೆಯುವ ಫಲಾನುಭವಿಗಳಿಗೆ ಸಿವಿಲ್ ಸ್ಕೋರ್ ಕಡ್ಡಾಯಗೊಳಿಸಬಾರದು ಎಂದು ಜಿಲ್ಲಾ ಪಂಚಾಯತ ಸಿಇಓ ಭುವನೇಶ ಪಾಟೀಲ ಅವರು ಸೂಚಿಸಿದರು.

ಕೃಷಿ ಅವಧಿ ಸಾಲವನ್ನು ಬ್ಯಾಂಕುಗಳು ಕೃಷಿಯ ಕೋರ್ ಚಟುವಟಿಕೆಗಳಿಗಿಂತ ನಾನ್–ಕೋರ್ ಕ್ಷೇತ್ರಗಳಿಗೆ ಹೆಚ್ಚು ಒತ್ತು ನೀಡುತ್ತಿರುವುದನ್ನು ಸೂಚಿಸಿ, ಮುಂದಿನ ದಿನಗಳಲ್ಲಿ ಕೋರ್ ಕೃಷಿ ಚಟುವಟಿಕೆಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ಸಾಲ ನೀಡುವಂತೆ ನಿರ್ದೇಶನ ನೀಡಿದರು. ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಪ್ರಗತಿಯನ್ನು ಪ್ರತ್ಯೇಕವಾಗಿ ಪರಿಶೀಲಿಸಿ, ಬಾಕಿ ಇರುವ ಸಾಲ ವಿತರಣೆ ಪ್ರಕರಣಗಳನ್ನು ಶೀಘ್ರ ಪೂರ್ಣಗೊಳಿಸುವಂತೆ ಬ್ಯಾಂಕರಿಗೆ ಸೂಚಿಸಿದರು.

ನಾಬಾರ್ಡ್‌ನ ಜಿಲ್ಲಾ ಅಭಿವೃದ್ಧಿ ವ್ಯವಸ್ಥಾಪಕ ಮಯೂರ್ ಕಾಂಬಳೆ ಅವರು ಮಾತನಾಡಿ, ಕಳೆದ ಹಣಕಾಸು ವರ್ಷ ದಲ್ಲಿ ಜಿಲ್ಲೆಯ ಒಟ್ಟು ಸಾಲ ವಿತರಣೆ 11,800 ಕೋಟಿಯಿಂದ 14,800 ಕೋಟಿಗೆ ಏರಿಕೆಯಾಗಿದ್ದು, 3,000 ಕೋಟಿಗಳ ಹೆಚ್ಚಳ ದಾಖಲಾಗಿದೆ. ಇದರಲ್ಲಿ ಎಂಎಸ್‌ಎಂಇ ಕ್ಷೇತ್ರದಲ್ಲಿ 1,500 ಕೋಟಿ ಹಾಗೂ ಕೃಷಿ ಕ್ಷೇತ್ರದಲ್ಲಿ 1,000 ಕೋಟಿಗಳ ಹೆಚ್ಚಳವಾಗಿದೆ ಎಂದು ಅವರು ಹೇಳಿದರು.

ಪಿಎಂ ಸೂರ್ಯಘರ್ ಯೋಜನೆ ಸೇರಿದಂತೆ ಸೌರಶಕ್ತಿ ಆಧಾರಿತ ಘಟಕಗಳಿಗೆ ಬ್ಯಾಂಕುಗಳ ಮೂಲಕ ಹೆಚ್ಚಿನ ಹಣಕಾಸು ಸೌಲಭ್ಯ ಒದಗುತ್ತಿರುವುದರಿಂದ ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲೂ ಉತ್ತಮ ಪ್ರಗತಿ ಕಂಡುಬಂದಿದೆ. ನವಲಗುಂದ ಹಾಗೂ ಅಣ್ಣಿಗೇರಿ ಭಾಗಗಳಲ್ಲಿ ಕೃಷಿ ಹೊಂಡಗಳ ನಿರ್ಮಾಣಕ್ಕೆ ಉತ್ತಮ ಸ್ಪಂದನೆ ದೊರಕಿದ್ದು, ಮುಂದಿನ ದಿನಗಳಲ್ಲಿ ಅವುಗಳನ್ನು ಇನ್ನಷ್ಟು ವಿಸ್ತರಿಸುವ ಅಗತ್ಯವಿದೆ ಎಂದು ಅವರು ತಿಳಿಸಿದರು.

ಎಐಎಫ್ ಹಾಗೂ ಪಿಎಂಎಫ್‌ಎಂಇ ಯೋಜನೆಗಳು ಸೆಪ್ಟೆಂಬರ್ 30, 2026 ರವರೆಗೆ ಮಾತ್ರ ಜಾರಿಯಲ್ಲಿರುವುದರಿಂದ, ಆ ಅವಧಿಯೊಳಗೆ ಹೆಚ್ಚು ಹೆಚ್ಚು ಸಾಲ ಮಂಜೂರು ಮಾಡುವಂತೆ ಬ್ಯಾಂಕ್ ಅಧಿಕಾರಿಗಳಿಗೆ ಅವರು ಸೂಚಿಸಿದರು.

ಐದು ವರ್ಷಗಳ ಅವಧಿಗೆ ಸಮಗ್ರ ಕೃಷಿ ಪದ್ಧತಿ ಯೋಜನೆ ಜಾರಿಗೆ ತರಲು ನಿರ್ಧರಿಸಲಾಗಿದ್ದು, ಕೆವಿಜಿಬಿ ಬ್ಯಾಂಕಿನ 10 ಶಾಖೆಗಳನ್ನು ಗುರುತಿಸಲಾಗಿದೆ. ಧಾರವಾಡ, ಕುಂದಗೋಳ, ನವಲಗುಂದ ಹಾಗೂ ಅಣ್ಣಿಗೇರಿ ಭಾಗಗಳಲ್ಲಿ 15 ಸಾವಿರ ರೈತರನ್ನು ಒಳಗೊಂಡಂತೆ 225 ಕೋಟಿ ವೆಚ್ಚದಲ್ಲಿ ಈ ಯೋಜನೆ ಅನುಷ್ಠಾನಗೊಳ್ಳಲಿದೆ ಎಂದು ಅವರು ಹೇಳಿದರು.

ಸಮಗ್ರ ಕೃಷಿ ಪದ್ಧತಿ ಯೋಜನೆಗೆ ಕೃಷಿ, ತೋಟಗಾರಿಕೆ, ಪಶುಸಂಗೋಪನೆ ಹಾಗೂ ಮೀನುಗಾರಿಕೆ ಇಲಾಖೆಗಳ ಅಧಿಕಾರಿಗಳು ಸಮನ್ವಯದಿಂದ ರೈತರಿಗೆ ಜಾಗೃತಿ ಮೂಡಿಸಬೇಕು. ಒಂದು ಘಟಕಕ್ಕೆ 10 ಲಕ್ಷದಿಂದ 50 ಲಕ್ಷದವರೆಗೆ ಯೋಜನೆ ರೂಪಿಸಬಹುದಾಗಿದ್ದು, ನಬಾರ್ಡ್ ವತಿಯಿಂದ 1.5 ಲಕ್ಷದವರೆಗೆ ಸಬ್ಸಿಡಿ ದೊರೆಯಲಿದೆ ಎಂದು ಅವರು ತಿಳಿಸಿದರು.

ಸಭೆಯಲ್ಲಿ ಸ್ವಾಗತಿಸಿ, ಜಿಲ್ಲಾ ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕ ಬಸವರಾಜ ಗಡಾದವರ ಮಾತನಾಡಿ, 2025–26ನೇ ಹಣಕಾಸು ವರ್ಷದಲ್ಲಿ ಜಿಲ್ಲೆಯ ಬ್ಯಾಂಕುಗಳು ರೂ. 13,790.44 ಕೋಟಿಗಳ ಗುರಿಯ ವಿರುದ್ಧ ರೂ.14,827.36 ಕೋಟಿ ಸಾಲ ವಿತರಣೆ ಮಾಡಿ ಗುರಿ ಮೀರಿ ಸಾಧನೆ ಮಾಡಿವೆ. ಆದ್ಯತಾ ವಲಯಕ್ಕೆ ರೂ. 16,167.83 ಕೋಟಿಗಳ ಗುರಿ ನಿಗದಿಪಡಿಸಲಾಗಿದೆ ಎಂದು ತಿಳಿಸಿದರು.

ವೇದಿಕೆಯಲ್ಲಿ ಆರ್.ಬಿ.ಐ ಸಹಾಯಕ ಮಹಾಪ್ರಬಂಧಕ ಅರುಣ ಹಾಗೂ ಬ್ಯಾಂಕ್ ಆಫ್ ಬರೋಡಾ ಹುಬ್ಬಳ್ಳಿ ಶಾಖೆಯ ಸಹಾಯಕ ಮಹಾಪ್ರಬಂಧಕ ಹರ್ಷಾ ಅವರು ಇದ್ದರು.

ಈ ಸಂದರ್ಭದಲ್ಲಿ ಲೀಡ್ ಬ್ಯಾಂಕ್ ಧಾರವಾಡವು 2026–27ನೇ ಸಾಲಿನ ಜಿಲ್ಲಾ ವಾರ್ಷಿಕ ಸಾಲ ಯೋಜನೆಯನ್ನು ಬಿಡುಗಡೆ ಮಾಡಲಾಯಿತು.

ಸಭೆಯಲ್ಲಿ ವಿವಿಧ ಬ್ಯಾಂಕುಗಳ ಜಿಲ್ಲಾ ಮಟ್ಟದ ವ್ಯವಸ್ಥಾಪಕರು ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

# ಹೇಮಲತಾ ನಾಯಕ್ ಬಹಿರಂಗ ಚರ್ಚೆಗೆ ಬರಲಿ : ಹಾಲುಮತ ಮಹಾಸಭಾ




> ಸಿಎಂ ಸಿದ್ಧರಾಮಯ್ಯ ಮುಂದುವರೆಯಲಿ ಅಹಿಂದ ವರ್ಗದ ನಾಯಕರಾಗಿರುವ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಸರ್ವ ಸಮಾಜಕ್ಕೆ ಅತ್ಯುತ್ತಮ ಯೋಜನೆಗಳನ್ನು ನೀಡಿ ದೇಶದಲ್ಲಿ ಉತ್ತಮ ಮುಖ್ಯಮಂತ್ರಿ ಎನಿಸಿಕೊಂಡಿದ್ದಾರೆ. ಇಂತವರನ್ನು ಕಾಂಗ್ರೆಸ್ ಪಕ್ಷ ರಾಜೀನಾಮೆ ಕೊಡಬೇಕು ಎಂದು ಸಂದೇಶ ನೀಡಿದೆ ಎಂಬುದು ಸರಿಯಲ್ಲ. ಕಾಂಗ್ರೆಸ್ ಹೈಕಮಾಂಡ್ ಸಿದ್ಧರಾಮಯ್ಯ ಅವರನ್ನು ಇನ್ನು ಎರಡು ವರ್ಷ ಮುಖ್ಯಮಂತ್ರಿಯಾಗಿ ಮುಂದುವರೆಸಬೇಕು ಎಂದು ಹಾಲುಮತ ಮಹಾಸಭಾ ಜಿಲ್ಲಾಧ್ಯಕ್ಷ ಹನುಮಂತಪ್ಪ ಕೌದಿ, ಕೊಪ್ಪಳ ತಾಲೂಕು ಅಧ್ಯಕ್ಷ ಮುದ್ದಪ್ಪ ಬೇವಿನಹಳ್ಳಿ ಅಗ್ರಹಿಸಿದ್ದಾರೆ.

**ಬೆಳಗಾವಿ ವಾರ್ತೆ ಕೊಪ್ಪಳ :** ವಿಜಯನಗರ ಸಾಮ್ರಾಜ್ಯ ಸ್ಥಾಪಕರಾಗಿರುವ ಹಕ್ಕ–ಬುಕ್ಕರು ಕುರುಬ ಸಮಾಜಕ್ಕೆ ಸೇರಿರುವ ಕುರಿತು ಹತ್ತಾರು ದಾಖಲೆಗಳು ನಮ್ಮ ಬಳಿ ಲಭ್ಯವಿವೆ. ಆದರೆ ಹಕ್ಕಬುಕ್ಕರು ಬೇಡ ಕುಲದ ಸಂಜಾತರು ಎಂದು ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ ತಪ್ಪು ಮಾಹಿತಿ ನೀಡಿ ಸಮಾಜಕ್ಕೆ ಗೊಂದಲ ಮೂಡಿಸುವ ಕೆಲಸ ಮಾಡಿದ್ದಾರೆ ಎಂದು ಹಾಲುಮತ ಮಹಾಸಭಾ ಜಿಲ್ಲಾ ಪದಾಧಿಕಾರಿಗಳು ಆಕ್ರೋಶ ವ್ಯಕ್ತಪಡಿಸಿದ್ದು, ಅವರು ತಮ್ಮಲ್ಲಿರುವ ದಾಖಲೆಗಳೊಂದಿಗೆ ಬಹಿರಂಗ ಚರ್ಚೆಗೆ ಬರಲಿ. ಇಲ್ಲ ಕ್ಷಮೆಯಾಚಿಸಲಿ ಎಂದು ಗೋಷ್ಠಿಯಲ್ಲಿ ಹಾಲುಮತ ಮಹಾಸಭಾ ಜಿಲ್ಲಾಧ್ಯಕ್ಷ ಹನುಮಂತಪ್ಪ ಕೌದಿ ಸವಾಲು ಹಾಕಿದ್ದಾರೆ.

ಈ ಕುರಿತು ಬುಧವಾರ ನಗರದ ಕಾರ್ಯನಿರತ ಪತ್ರಕರ್ತರ ಸಂಘದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಅವರು ಮಾತನಾಡಿದರು. ಕಳೆದ ಎಪ್ರೇಲ್ 24 ರಂದು ವಿಧಾನಪರಿಷತ್ ಸದಸ್ಯೆ ಹೇಮಲತ ನಾಯಕ್ ಅವರು ಹಕ್ಕು ಬುಕ್ಕರು ಬೇಡ ಕುಲದ ಸಂಜಾತರು ಎಂದು ಮಾಧ್ಯಮದಲ್ಲಿ ಹೇಳಿಕೆ ನೀಡಿ ಸಮಾಜಿಕ ಜಾಲತಾಣಗಳಲ್ಲಿ ಹಂಚಿಕೆ ಮಾಡಿದ್ದಾರೆ.

ಇದನ್ನು ನಾವು ಫೇಸ್ಬುಕ್ ಪೇಜ್‌ನಲ್ಲಿ ವಿರೋಧಿಸಿ ಚರ್ಚೆಗೆ ಬರುವಂತೆ ಅಹ್ವಾನಿಸಿದ್ದೇವೆ. ಆದರೆ ಇದುವರೆಗೂ ಅವರು ಯಾವುದೇ ಪ್ರತಿಕ್ರೀಯೆ ನೀಡಿಲ್ಲ. ಹಕ್ಕ ಬುಕ್ಕರು ಕುರುಬ ಕುಲದವರು ಎನ್ನುವುದಕ್ಕೆ ಸಾಕಷ್ಟು ಇತಿಹಾಸ ಸಾಕ್ಷಿ ಪುರಾವೆಗಳಿವೆ. ಚಿತ್ರದುರ್ಗ ಜಿಲ್ಲೆ, ಹೊಳಲ್ಕೆರೆ ತಾಲೂಕಿನ ತಾಳಿಕಟ್ಟಿ ಗ್ರಾಮದ ಹಳ್ಳದ ಗುಂಡಿಯಲ್ಲಿ ಸಿಕ್ಕ ಶಾಸನ ದಲ್ಲಿ ಹಕ್ಕಬುಕ್ಕರು ಕುರುಬ ಕುಲದವರು ಎಂದು ಕುರುಬ ಶಾಸನ ಹೇಳುತ್ತದೆ.

ವಿಜಯನಗರ ಸಾಮ್ರಾಜ್ಯ ಸ್ಥಾಪಕರಾದ ಸಂಗಮನ ನಾಲ್ಕನೇಯ ಮಗ ಮಾರಪ್ಪ ಒಡೆಯನು ಕ್ರಿಸ್ತಶಕ 1342ರಲ್ಲಿ ಹಾಕಿದ ಶಾಸನದಲ್ಲಿ ಸಾಮ್ರಾಜ್ಯದ ಆದಿ ದೈವ ವಿರೂಪಾಕ್ಷ ಬೀರಪ್ಪ, ವಿರೂಪಾಕ್ಷ ನನ್ನ ಕುಲದೇವ ಆಗಿದ್ದಾನೆ ಮತ್ತು ನನ್ನ ಕುಟುಂಬ ದೇವರು ಆಗಿದ್ದಾನೆ ನಾವು ಕುರುಬರೆಂದು ಹೇಳಿಕೊಂಡಿದ್ದಾನೆ.

ಇದನ್ನು ವಿದ್ವಾಂಸರಾದ ಅನಿಲಾ ವರ್ಗೀಸ್ ಎಂಬ ಮಹಿಳೆ ತಮ್ಮ ಕೃತಿ ಪರಿಕಲಜಿ ಅಂಡ್ ಹಾರ್ಟ್ ರಿಲಿಜನ್ ನ್ಯೂ ಪರ್ಸ್ಪೆಕ್ಟಿವ್ಸ್ ಆನ್ ವಿಜಯನಗರ ಎಂಬ ಕೃತಿಯಲ್ಲಿ ವಿವರಿಸಿದ್ದಾರೆ. 1537 ರಲ್ಲಿ ವಿಜಯನಗರ ಕಾಲದ ಕೆಲವು ಶಾಸನಗಳಲ್ಲಿ ರೈಚೂರ್ ಜಿಲ್ಲೆಯ ಲಿಂಗಸೂರು ಶಾಸನದಲ್ಲಿ ಶ್ರೀ ಬಿರುಪಾಕ್ಷಲಿಂಗ ನಮಃ ಹಂಪಿಯ ವಿರೂಪಾಕ್ಷ ನು ಕುರುಬರ ಬೀರೇಶ –ವೀರೇಶ –ವಿರುಪಾಕ್ಷನೆಂದು ಈ ಶಾಸನವನ್ನು ಆಧರಿಸಿ ಖ್ಯಾತ ಸಂಶೋಧಕ ಡಾ. ಎಂ.ಎಂ.ಕಲಬುರ್ಗಿ ಅವರು ಅಭಿಪ್ರಾಯ ಪಟ್ಟಿದ್ದಾರೆ.

ಸಂಶೋಧಕರಾದ ಎಂ ಕ್ಯಾಟೊ ಟೇಲರ್ ಅವರು ಯಾದವರು ಬ್ರಾಹ್ಮಣೀಕರಣಗೊಂಡ', ಆರ್ಯೀಕರಣಗೊಂಡ ಕುರುಬರು ಎಂದು ಕರ್ನಾಟಕ ಗೆಜೆಟೀರ್‌ನಲ್ಲಿ ಪ್ರತಿಪಾದಿಸಿದ್ದಾರೆ. ವಿದ್ಯಾರಣ್ಯರು ಪಕ್ಕ ಬುಕ್ಕರಿಗೆ ರಾಯರು ಎಂಬ ಬಿರುದನ್ನು ಕೊಟ್ಟು ಅವರು ನನಗೆ ಹಾಲನ್ನು ತಂದು ಕೊಡುತ್ತಿದ್ದ ಕುರುಬರ ಬುಕ್ಕನೆಂಬುವನಿಗೆ ಪಟ್ಟಾಭಿಷೇಕ ಮಾಡಿರುವ ಕುರಿತು ವಿಜಯನಗರ ರಾಜ್ಯದ ಮೂಲ ಚರಿತ್ರೆ ಎಂಬುದು ಇದೆ. ಮ್ಯಾನುವಲ್ ಆಫ್ ಬಳ್ಳಾರಿ ಡಿಸ್ಟಿಕ್ಸ್ ಗೆಜೆಟೆರ್ ಪೇಜ್ ನಂಬರ್ 107 1896ರಲ್ಲಿ ಹಕ್ಕ ಬುಕ್ಕರು ಕುರುಬ ಎಂಬ ಉಲ್ಲೇಖವಿದೆ. 1336 ವಿಜಯನಗರ ಸಾಮ್ರಾಜ್ಯನ ಕಟ್ಟಿದ ಹಕ್ಕು ಬುಕ್ಕರು ಕದಂಬ ರಾಜರ ವಂಶಕ್ಕೆ ಸೇರಿದವರು ಕುರುಬರು ಎಂದು ಮೈಸೂರ್ ಅಂಡ್ ಕೂರ್ಗ್ ಗೆಜೆಟೆಟೆರ್ 3ರಲ್ಲಿದೆ.

ಹಕ್ಕ–ಬುಕ್ಕರು ಕುರುಬರು ಎಂಬುದಕ್ಕೆ ಹಲವು ಕಾವ್ಯ ವಚನ ಮತ್ತು ಸಾಹಿತ್ಯ ಕೃತಿಗಳಲ್ಲಿ ಸಾಕ್ಷಿ ಪುರಾವೆಗಳಿವೆ. ವಿಜಯ ನಗರ ಸಾಮ್ರಾಜ್ಯವನ್ನು ಆಳಿದವರು ಕುರುಬರು ಎಂದು ಡೊಮೆಸ್ಟಿಕ್ ರಿಸರ್ಚ್ ರ್ ಶ್ಯಾಮ್ ಬಿಎ ಜೋಶಿ, ಡಾ.ವಸುಂದರ, ಕಾಕ್ಸರ್ ಆರ್.ಸಿ.ಧೀರೆ, ಡಾ.ಎಂ ಎಂ ಕಲಬುರ್ಗಿ, ಚೆನ್ನಪ್ಪ ಕವಿ, ಸರ್ವಜ್ಞ, ಕೆಳದಿ ಕವಿ ಲಿಂಗಣ್ಣ, ಡಾ.ಲಿಂಗದಳ್ಳಿ ಹಾಲಪ್ಪ, ಡಾ. ಹೆಗಡೆ, ಎಫ್.ಟಿ.ಹಳ್ಳಿಕೇರಿ, ಮತ್ತು ಫಾರಿನ್ ರಿಸರ್ಚ್ ಸರ್ ರಾಬರ್ಟ್ ಸೇವೆಲ್, ಬಿ.ಎಲ್.ರೈಸ್ ಗುಸ್ತವಾ ಫೋರ್ಟ್, ಎಚ್.ವಿ.ವಿಲ್ಸನ್ ಎಂ ಕ್ಯಾಟೋ, ಟೇಲರ್ ಲಾರೆನ್ಸ್‌ಮೆಕೆಂಜಿ, ತೆನ್ನಿಂಗ್ ರೋಡರಿಗುಜ್ ಇನ್ನು ಮುಂತಾದ ಸಂಶೋಧಕರು ತಮ್ಮ ಅಭಿಪ್ರಾಯವನ್ನು ತಮ್ಮ ಪುಸ್ತಕಗಳಲ್ಲಿ ದಾಖಲಿಸಿದ್ದಾರೆ ಎಂದು ದಾಖಲೆ ನೀಡಿದ ಹನುಮಂತಪ್ಪ ಕೌದಿ ಅವರು ಜವಬ್ದಾರಿಯುತ ಸ್ಥಾನದಲ್ಲಿರುವ ಅವರು ಜಾತಿ– ಜಾತಿ ನಡುವೆ ಒಡಕನ್ನು ಸೃಷ್ಟಿಸುವ ಉದ್ದೇಶ ಹೊಂದಿದ್ದಾರೆ ಎಂಬ ತಪ್ಪು ಕಲ್ಪನೆ ಮೂಡುತ್ತದೆ. ಹಕ್ಕ ಬುಕ್ಕರು ಬೇಡ ಕುಲ ಸಂಜಾತರು ಎನ್ನುವು ದಕ್ಕೆ ಯಾವ ಇತಿಹಾಸ ಪುರಾವೆಗಳಿವೆ. ಇದ್ದರೆ ನಿಮ್ಮ ಸಂಶೋಧಕರೊಂದಿಗೆ ಬಹಿರಂಗ ಚರ್ಚೆಗೆ ಬನ್ನಿ. ಇಲ್ಲ ನಿಮ್ಮ ಹೇಳಿಕೆಯನ್ನು ಹಿಂದೆ ತೆಗೆದುಕೊಂಡು ಕ್ಷಮೆ ಕೇಳಬೇಕು. ಇಲ್ಲದಿದ್ದರೆ ನಿಮ್ಮ ವಿರುದ್ಧ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಹಾಲುಮತ ಸಮಾಜದ ಕೊಪ್ಪಳ ತಾಲೂಕು ಅಧ್ಯಕ್ಷ ಮುದ್ದಪ್ಪ ಬೇವಿನಹಳ್ಳಿ, ಪ್ರಧಾನ ಕಾರ್ಯದರ್ಶಿ ಪರಶುರಾಮ ಅಡ್ಡಿಗೇರಿ, ಗೌರವ ಅಧ್ಯಕ್ಷ ದ್ಯಾಮನಗೌಡ ಪೊಲೀಸ್ ಪಾಟೀಲ್, ರಾಜ್ಯ ಸಂಘಟನಾ ಕಾರ್ಯದರ್ಶಿ ದ್ಯಾಮಣ್ಣ ಕರಿಗಾರ ಇದ್ದರು.

# ಕೆಇಬಿ ನೌಕರರ ಸೇವೆಗೆ ಗೌರವವಿರಲಿ, ಸಿಟ್ಟು ಜನಪ್ರತಿನಿಧಿಗಳ ಮೇಲಿರಲಿ

**ವರದಿ : ಪಂಚಯ್ಯ ಹಿರೇಮಠ.**

**ಬೆಳಗಾವಿ ವಾರ್ತೆ ಗಂಗಾವತಿ :** ಇತ್ತೀಚೆಗೆ ವಿದ್ಯುತ್ ವ್ಯತ್ಯಯವಾದಾಗ ಸಾರ್ವಜನಿಕರು ಕೆಇಬಿ ಸಿಬ್ಬಂದಿ, ಅದರಲ್ಲೂ ಲೈನ್‌ಮನ್‌ಗಳ ಮೇಲೆ ಸಿಟ್ಟು, ದರ್ಪ ತೋರಿಸುವುದು ಕಂಡುಬರುತ್ತಿದೆ.



ಈ ಹಿನ್ನೆಲೆಯಲ್ಲಿ ಸಾರ್ವಜನಿಕರಲ್ಲಿ ಒಂದು ವಿನಂತಿ. 'ಫ್ರೀ ಫ್ರೀ' ಎಂದು ಆಶ್ವಾಸನೆ ನೀಡಿ ಮತ ಪಡೆದ ಜನಪ್ರತಿನಿಧಿಗಳ ಮೇಲೆ ನಿಮ್ಮ ಸಿಟ್ಟು ಇರಲಿ, ಆದರೆ ಹಗಲು–ರಾತ್ರಿ ಎನ್ನದೆ ನಮಗೆ ನಿರಂತರ ಬೆಳಕು ನೀಡಲು ಶ್ರಮಿಸುವ ಕೆಇಬಿ ನೌಕರರ ಮೇಲಲ್ಲ. ಮಳೆಗಾಲದಲ್ಲಿ ಒಂದು ಗಂಟೆ ಕರೆಂಟ್ ಹೋದರೆ ಪ್ರಾಣ ಹೋದಂತೆ ಚಡಪಡಿಸುವ ನಾವು, ಅದರ ಹಿಂದೆ ಇರುವ ಲೈನ್‌ಮನ್‌ಗಳ ಶ್ರಮ, ಕಷ್ಟದ ಬಗ್ಗೆ ಯೋಚಿಸುವುದೇ ಇಲ್ಲ.ಈ ಲೈನ್‌ಮನ್‌ಗಳ ಕೆಲಸ ಗಡಿ ಕಾಯುವ ಸೈನಿಕರ ಕೆಲಸಕ್ಕಿಂತ ಕಡಿಮೆಯೇನಲ್ಲ ಎಂಬುದು ನನ್ನ ಬಹುಕಾಲದ ಅಭಿಪ್ರಾಯ.

ಎಷ್ಟೋ ಸಂದರ್ಭಗಳಲ್ಲಿ ಕೆಲಸ ಮಾಡುತ್ತಿರುವಾಗ ವಿದ್ಯುತ್ ತಗುಲಿ ಅಂಗವಿಕಲರಾಗಿರುವ, ಪ್ರಾಣ ಕಳೆದುಕೊಂಡ ಉದಾಹರಣೆಗಳು ನಮ್ಮ ಕಣ್ಣ ಮುಂದಿವೆ. ನಾವೆಲ್ಲ ನಡುರಾತ್ರಿ ಬೆಚ್ಚನೆ ಮನೆಯಲ್ಲಿ ಮಲಗಿರುವಾಗ, ಗುಡುಗು, ಗಾಳಿ, ಮಳೆ ಎಂದು ಲೆಕ್ಕಿಸದೆ, ಜೀವದ ಹಂಗು ತೊರೆದು ನಮ್ಮ ಮನೆಗಳನ್ನು ಬೆಳಗಿಸುವ ಇವರ ಸೇವಾ ಗುಣಕ್ಕೆ ನಾವು ಸದಾ ಗೌರವ ನೀಡುವುದು ನಮ್ಮ ಕರ್ತವ್ಯ.

ನಾಡಿನ ಸೇವೆಯಲ್ಲಿ ಸದಾ ತೊಡಗಿರುವ ಎಲ್ಲಾ ಲೈನ್ ಮನ್‌ಗಳಿಗೂ, ಕೆಇಬಿ ಸಿಬ್ಬಂದಿಗೂ ನನ್ನ ಹೃತ್ಪೂರ್ವಕ ಧನ್ಯವಾದಗಳು.

# ಇಸ್ಪೀಟ್ ಜೂಜಾಟದ ಮೇಲೆ ಪೊಲೀಸ್ ದಾಳಿ: 7 ಮಂದಿ ಬಂಧನ, ನಗದು ಜಪ್ತಿ



**ಬೆಳಗಾವಿ ವಾರ್ತೆ ಗಂಗಾವತಿ :** ತಾಲೂಕಿನ ಹೇರೂರು ಗ್ರಾಮದ ಮೊಬೈಲ್ ಟವರ್ ಸಮೀಪದ ಸಾರ್ವಜನಿಕ ಸ್ಥಳದಲ್ಲಿ ಇಸ್ಪೀಟ್ ಜೂಜಾಟದಲ್ಲಿ ತೊಡಗಿದ್ದ ಏಳು ಜನರನ್ನು ಗಂಗಾವತಿ ಗ್ರಾಮೀಣ ಠಾಣೆಯ ಸಿಪಿಐ ರಂಗಪ್ಪ ಹೆಚ್. ದೊಡ್ಡಮನಿ ನೇತೃತ್ವದ ತಂಡ ಸೋಮವಾರ ಸಂಜೆ ದಾಳಿ ನಡೆಸಿ 7 ಜನರನ್ನು ಬಂಧಿಸಿದ್ದಾರೆ.

ಬಂಧಿತರು ಹೇರೂರು ಗ್ರಾಮದ ವಿರುಪಣ್ಣ (43), ಫಕೀರಪ್ಪ (41), ಮಲ್ಲಿಕಾರ್ಜುನ (52), ಯಮನೂರಪ್ಪ (55), ಬಸವರಾಜ (55), ಸಿದ್ದು (29) ಮತ್ತು ಹೆಚ್.ಎಂ. ರುದ್ರಯ್ಯ ಸ್ವಾಮಿ (63) ಎಂದು ಗುರುತಿಸಲಾಗಿದೆ. ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಪೊಲೀಸರು, ಬಂಧಿತರಿಂದ ಒಟ್ಟು 6,150 ರೂ. ನಗದು ವಶಪಡಿಸಿಕೊಂ ಡಿದ್ದಾರೆ.

ಈ ಕುರಿತು ಗಂಗಾವತಿ ಗ್ರಾಮೀಣ ಠಾಣೆಯ ಸಿಪಿಐ ರಂಗಪ್ಪ ಹೆಚ್. ದೊಡ್ಡಮನಿ ಅವರು ಗ್ರಾಮೀಣ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ವ್ಯಾಪ್ತಿಯಲ್ಲಿ ಕಾನೂನು ಬಾಹಿರ ಚಟುವಟಿಕೆಗೆ ಯಾವು ದೇ ಆಸ್ಪದ ಕೊಡಲ್ಲ ಸಾರ್ವಜನಿಕರು ಇಂತಹ ಚಟುವಟಿಕೆ ನಡೆದರೆ ಕೂಡಲೇ 112 ಗೆ ಅಥವಾ ಗ್ರಾಮೀಣ ಠಾಣೆಯ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದು ಮಾಧ್ಯಮಕ್ಕೆ ತಿಳಿಸಿದರು. ಸದ್ಯಕ್ಕೆ ಪ್ರಕರಣ ದಾಖಲಾಗಿದ್ದು, ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಸಾಧಕ ವಿದ್ಯಾರ್ಥಿಗಳಿಗೆ ಸನ್ಮಾನ, ಪ್ರಶಸ್ತಿ ಪ್ರದಾನ



**ಬೆಳಗಾವಿ ವಾರ್ತೆ ಬೆಳಗಾವಿ:** ಮಕ್ಕಳ ಜ್ಞಾನಾರ್ಜನೆಯ ವೃದ್ಧಿಗೆ ಬೆಳಗಾವಿಗೆ ಒಂದು ಉತ್ತಮವಾದ ಕೋಚಿಂಗ್ ಅಗತ್ಯತೆ ಇತ್ತು. ಅದನ್ನು ಎಮಿನಂಟ್ ಕೋಚಿಂಗ್ ಕೇಂದ್ರದವರು ಪೂರ್ಣ ಮಾಡಿದ್ದಾರೆಂಬ ತೃಪ್ತಿ ಇದೆ. ಜತೆಗೆ ಇಲ್ಲಿ ಶಿಕ್ಷಣ ಪಡೆದಿರುವ ಮಕ್ಕಳು ಇನ್ನಷ್ಟು ಎತ್ತರಕೆ ಬೆಳೆಯಲಿ. ಅವರ ಭವಿಷ್ಯ ಉಜ್ವಲವಾಗಲಿ ಎಂದು ಮೇಯರ್ ಪ್ರೀತಿ ಕಾಮಕರ ಹೇಳಿದರು.

ನಗರದ ಖಾಸಗಿ ಮಾಲ್‌ನಲ್ಲಿ ಎಮಿನೆಂಟ್ ಕೋಚಿಂಗ್ ಕ್ಲಾಸಿಕ್ ವತಿಯಿಂದ ನಡೆದ ಬೇಸಿಗೆ ತರಬೇತಿ ವಿದ್ಯಾರ್ಥಿಗಳ ಬೀಳ್ಕೊಡುಗೆ, ವಿವಿಧ ಸ್ಪರ್ಧಾತ್ಮಕ ಶಾಲೆಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಸನ್ಮಾನ, ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಉಪ ಮಹಾಪೌರ ಹನಮಂತ ಕೊಂಗಾಲಿ ಮಾತನಾಡಿ, ಇಲ್ಲಿ ಮಕ್ಕಳು ಉತ್ತಮ ಸಾಧನೆಯನ್ನು ನೋಡಿದರೆ ಇಲ್ಲಿನ ಶಿಕ್ಷಣ ವ್ಯವಸ್ಥೆ ಉತ್ಕೃಷ್ಟಮಟ್ಟದ್ದಾಗಿದೆ ಎಂಬುವುದರಲ್ಲಿ ಎರಡು ಮಾತಿಲ್ಲ ಎಂದು ಹೇಳಿದರು.

ಬಿಜೆಪಿ ಮುಖಂಡ ಮುರಘೇಂದ್ರಗೌಡ ಪಾಟೀಲ, ನಿವೃತ್ತ ವಾಯುಸೇನೆ ಅಧಿಕಾರಿ, ನಿವೃತ್ತ ಜಿಲ್ಲಾ ಶಿಕ್ಷಣಾಧಿಕಾರಿ ಬಸವಲಿಂಗಪ್ಪ ಬಿ. ವಣ್ಣೂರ, ಲಿಟಲ್ ಸ್ಕಾಲರ್ಸ್ ಅಕಾಡೆಮಿಯ ಪ್ರಾಚಾರ್ಯರಾದ ಶೀಬಾ ಎಸ್. ನಾಗಲ್ಲಾ, ಕನ್ನಡಪ್ರಭ ಬ್ಯುರೋ ಮುಖ್ಯಸ್ಥ ಬ್ರಹ್ಮಾನಂದ ಹಡಗಲಿ ಮಾತನಾಡಿದರು.

ಎಮಿನೆಂಟ್ ಕೋಚಿಂಗ್ ಕೇಂದ್ರದ ಸಂಸ್ಥಾಪಕ ಮಂಜುನಾಥ ಜಿ. ಕೌಲಗಿ ಮಾತನಾಡಿ, ಮುಂದಿನ ದಿನಗಳಲ್ಲಿ ಶೈಕ್ಷಣಿಕ ರಂಗದಲ್ಲಿ ಮತ್ತಷ್ಟು ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತೇವೆ. ಜತೆಗೆ ನರ್ಸರಿಯಿಂದ ಹಿಡಿದು ಎಸ್‌ಎಸ್‌ಎಲ್‌ಸಿವರೆಗೆ ಶಾಲೆಯನ್ನು ತೆರೆದು, ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ನೀಡುವ ಗುರಿ ಹೊಂದಿದ್ದೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರ ಆಪ್ತ ಸಹಾಯಕ ನಾಗಪ್ಪ ಮೇಟಿ, ರಾಯಬಾಗ ಬಿಇಒ ಕಚೇರಿ ಸಮೂಹ ಸಂಪನ್ಮೂಲ ವ್ಯಕ್ತಿ ಸುಲೇಮಾನ ಎಂ. ಶೇಖ, ವಿಕಾಸ ಸಂಸ್ಥೆ ಸಂಸ್ಥಾಪಕ ಪ್ರಧಾನ ಕಾರ್ಯದರ್ಶಿ ಭಾಗ್ಯಲಕ್ಷ್ಮಿ ?? ಎಂ. ಕೌಲಗಿ, ಆಡಳಿತಾಧಿಕಾರಿ ಸದಾನಂದ ಬಡ್ಡೂರ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹಾಂತೇಶ ಒಕ್ಕುಂದ, ವಿಕಾಸ ಸಂಸ್ಥೆ ಗೌರವ ಅಧ್ಯಕ್ಷರು ಸೋಮಶೇಖರ ಸುಲಿಗಾವಿ, ವಿಕಾಸ ಸಂಸ್ಥೆ ಉಪಾಧ್ಯಕ್ಷರು ಗುರುಸಿದ್ದಪ್ಪ ಕೌಲಗಿ, ಸಂಸ್ಥೆಯ ಸಂಘಟನಾ ಕಾರ್ಯದರ್ಶಿ ಚನ್ನಬಸಪ್ಪ ಪಡಗಾನೂರ, ಸಂಸ್ಥೆಯ ನಿರ್ದೇಶಕ ಸೋಮಶೇಖರ ಪಡಗಾನೂರ ಇದ್ದರು.

# ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026 ರ ಕುರಿತು ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಸಭೆ

**ಬೆಳಗಾವಿ ವಾರ್ತೆ ಗದಗ:** ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರ ಅಧ್ಯಕ್ಷತೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026 ರ ಕುರಿತು ರಾಜಕೀಯ ಪಕ್ಷಗಳ ಮುಖಂಡರೊಂ ದಿಗೆ ಸಭೆ ಜರುಗಿತು.

ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಮಾತನಾಡಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ –2026 ರ ಕಾರ್ಯವನ್ನು ಜರುಗಿಸಲು ಭಾರತ ಚುನಾವಣಾ ಆಯೋಗವು ದಿನಾಂಕಃ 14–05–2026 ರಂದು ಹೊರಡಿಸಿದ ಹಿನ್ನೆಲೆಯಲ್ಲಿ ದಿನಾಂಕಃ 25–05–2026 ರಂದು ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ –2026 ಸಂಬಂಧಿಸಿದ ವಿಷಯಗಳ ಕುರಿತು ಸಮಗ್ರ ಮಾಹಿತಿಯನ್ನು ನೀಡಲು ಜಿಲ್ಲೆಯ ನೋಂದಾಯಿತ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಸಭೆ ಆಯೋಜಿಸಲಾಗಿದೆ ಎಂದರು.

ಚುನಾವಣಾ ಆಯೋಗದ ವೇಳಾಪಟ್ಟಿಯನ್ವಯ ಪೂರ್ವ ತಯಾರಿ ಕುರಿತಂತೆ ಹಾಗೂ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತಂತೆ



ಮಾಹಿತಿಯನ್ನು ನೀಡಿದ ಅವರು ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ, ಜಿಲ್ಲಾ ಚುನಾವಣಾಧಿಕಾರಿಗಳ, ಅಪರ ಜಿಲ್ಲಾ ಚುನಾವಣಾಧಿಕಾರಿಗಳ, ಚುನಾವಣಾ ತಹಶೀಲ್ದಾರ, ಮತದಾರ ನೋಂದಣಾಧಿಕಾರಿಗಳ ಹಾಗೂ ಸಹಾಯಕ ಮತದಾರ ನೋಂದಣಾಧಿಕಾರಿಗಳ ವಿವರಗಳನ್ನು ಜಿಲ್ಲಾಧಿಕಾರಿಗಳು ತಿಳಿಸಿದರು.

ಪ್ರಸ್ತುತ, ಜಿಲ್ಲೆಯ 4 ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 967 ಮತಗಟ್ಟೆಗಳಿದ್ದು, 4,48,794 ಪುರುಷ ಮತದಾರರು, 4,56,352 ಮಹಿಳಾ ಮತದಾರರು ಹಾಗೂ 60 ತೃತೀಯ ಲಿಂಗಿ ಮತದಾರರು ಸೇರಿದಂತೆ ಒಟ್ಟು 9,05,206 ಮತದಾರರಿರುತ್ತಾರೆ. ಪ್ರತಿ ಮತಗಟ್ಟೆಗೆ ಒಬ್ಬರಂತೆ, ಜಿಲ್ಲೆಯಲ್ಲಿ ಒಟ್ಟು 967 ಮತಗಟ್ಟೆ ಮಟ್ಟದ ಅಧಿಕಾರಿ (ಬಿ.ಎಲ್.ಓ) ಗಳು ಹಾಗೂ ಪ್ರತಿ 10 ಬಿ.ಎಲ್.ಓ ಗಳಿಗೆ ಒಬ್ಬ ಮೇಲ್ವಿಚಾರಕರಂತೆ ಒಟ್ಟು 97 ಬಿ.ಎಲ್.ಓ ಮೇಲ್ವಿಚಾರಕರು ಕಾರ್ಯ ನಿರ್ವಹಿಸುತ್ತಿದ್ದಾರೆ. 2002 ರ ಮತದಾರರ ಪಟ್ಟಿಗೆ 2025 ರ ಮತದಾರರನ್ನು ಮ್ಯಾಪಿಂಗ್ ಮಾಡುವಲ್ಲಿ, ಜಿಲ್ಲೆಯ ಒಟ್ಟು 9,05,206 ಮತದಾರರ ಪೈಕಿ 8,26,953 ಮತದಾರರನ್ನು ಮ್ಯಾಪಿಂಗ್ ಮಾಡಿದ್ದು, ಶೇಕಡಾ 91.36ರಷ್ಟು ಪ್ರಗತಿಯನ್ನು ಸಾಧಿಸಿರುತ್ತಾರೆ.ಮತದಾರರ ಸಂಖ್ಯೆವಾರು ಮತಗಟ್ಟೆಗಳ ಮಾಹಿತಿಯನ್ನು ಮತ್ತು ಮತಗಟ್ಟೆ ಸಂಖ್ಯೆವಾರು ಮತಗಟ್ಟೆ ಸ್ಥಳಗಳ ಮಾಹಿತಿಯನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲೆಯ ಎಲ್ಲ 967 ಮತಗಟ್ಟೆಗಳಿಗೆ, ಮತಗಟ್ಟೆ ಮಟ್ಟದ ಏಜೆಂಟ್ (BLA) ಗಳನ್ನು ನೇಮಕ ಮಾಡಿ ಪಟ್ಟಿಯನ್ನು ನೀಡಲು ಜಿಲ್ಲಾಧಿಕಾರಿಗಳು ತಿಳಿಸಿದರು.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ಬಿ.ಎಲ್.ಓ, ಸಹಾಯಕ ಮತದಾರ ನೋಂದಣಾಧಿಕಾರಿಗಳು ಹಾಗೂ ಮತದಾರ ನೋಂದಣಾಧಿಕಾರಿಗಳ ಜೊತೆ ಸಹಕಾರ ನೀಡುವಂತೆ ಸಂಬಂಧಿಸಿದ ನೋಂದಾಯಿತ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಮುಖಂಡರುಗಳಿಗೆ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ಜಿಲ್ಲೆಯ ಮತದಾರರ ನೊಂದಣಾಧಿಕಾರಿಗಳು, ಚುನಾವಣಾ ತಹಶೀಲ್ದಾರರು, ಜಿಲ್ಲೆಯ ಎಲ್ಲ ಸಹಾಯಕ ಮತದಾರ ನೊಂದಣಾಧಿಕಾರಿಗಳು ಹಾಗೂ ತಹಶೀಲ್ದಾರರು, ಜಿಲ್ಲೆಯ ರಾಜಕೀಯ ಪಕ್ಷದ ಪ್ರತಿನಿಧಿಗಳು/ಪದಾಧಿಕಾರಿಗಳು ಹಾಜರಿದ್ದರು.

# ಕಾಮಗಾರಿಗೆ ಚಾಲನೆ



**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರು:** ಕ್ಷೇತ್ರದ ವಿವಿಧೆಡೆ ತಾಲೂಕಿನ ಮಾರ್ಗನ ಕೊಪ್ಪ ಗ್ರಾಮದ ಪ್ರಮುಖ ಸಿಸಿ ಹಾಗೂ ಮೆಟ್ಲಿಂಗ್ ಕಾಮಗಾರಿಗೆ ಶಾಸಕ ಬಾಬಾಸಾಹೇಬ ಪಾಟೀಲ್ ಭೂಮಿ ಗುದ್ದಲಿ ಪೂಜೆ ನೆರವೇರಿಸಿ ಚಾಲನೆ ನೀಡಿದರು.

ಜೊತೆಗೆ ಇದೇ ಗ್ರಾಮದ ರೈತರ ಹೊಲಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆ ಕಾಮಗಾರಿಗೂ ಚಾಲನೆ ನೀಡಲಾಯಿತು.

ನಂತರ ಅವರು ಮಾತನಾಡಿ ಈ ಕಾಮಗಾರಿಗಳು ಕಳಪೆಯಾಗದಂತೆ ಗುತ್ತಿಗೆದಾರರು ನೋಡಿಕೊಳ್ಳಬೇಕು. ಈಗಾಗಲೇ ಕ್ಷೇತ್ರದ ಹಲವು ರಸ್ತೆ ಕಾಮಗಾರಿಗಳು ಪೂರ್ಣಗೊಂಡಿದ್ದು ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸಲಾಗಿದೆ ಎಂದರು.

ಈ ವೇಳೆ ಮುಖಂಡರುಗಳಾದ ಬ್ಲಾಕ ಅಧ್ಯಕ್ಷ ಸಂಗನಗೌಡ ಪಾಟೀಲ್, ಶಿವಯೋಗಿ ದೊಡ್ಡಮನಿ, ಸುರೇಶ ಕಾಕತಿ, ಸಾಗರ್ ದೇಸಾಯಿ, ಲಕ್ಷ ಣ್ ಪಾಟೀಲ್, ಮಾಜಿ ತಾಪಂ ಸದಸ್ಯ ಮುದಕಪ್ಪ ಮರಡಿ, ಪಿಡಿಓ ವಿನಾಯಕ ಕೊರವಿ ಬಸನಗೌಡ ಪಾಟೀಲ್, ಬಸವರಾಜ ಬಸರಕೋಡ, ಶಿವು ಪಾಟೀಲ, ಅಪ್ಪು ಕಳಸನ್ನವರ್, ಮರೆಣ್ಣವರ್ ಸೇರಿದಂತೆ ಗ್ರಾಮಸ್ಥರು ಕಾಂಗ್ರೆಸ್ ಮುಖಂಡರು ಭಾಗವಹಿಸಿದ್ದರು.

# ಪ್ರತಿಭಾ ಪುರಸ್ಕಾರ ಸಮಾರಂಭ



**ಬೆಳಗಾವಿ ವಾರ್ತೆ ಧಾರವಾಡ:** ಭಾರತವನ್ನು ಮತ್ತಷ್ಟು ಶಕ್ತಿಶಾಲಿ ರಾಷ್ಟ್ರವನ್ನಾಗಿ ಮಾಡುವ ಜವಾಬ್ದಾರಿ ಯುವಕರ ಮೇಲಿದೆ ಎಂದು ಸಮಾಜ ಸೇವಕರು ಹಾಗೂ ಸ್ವರ್ಣ ಸಮೂಹ ಸಂಸ್ಥೆಗಳ ವ್ಯವಸ್ಥಾಪಕ ಡಾ. ಸಿ.ಹೆಚ್.ವಿ.ಎಸ್.ವಿ ಪ್ರಸಾದ್ ಹೇಳಿದರು.

ಸ್ವಾಮಿ ವಿವೇಕಾನಂದ ರಕ್ತದಾನ ಫೌಂಡೇಶನ್ ಹಾಗೂ ಸ್ವರ್ಣ ಗ್ರೂಪ್ ಆಫ್ ಕಂಪನೀಸ್ ಸಹಯೋಗದಲ್ಲಿ ಧಾರವಾಡದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಂಸ್ಕೃತ ಸಭಾಭವನದಲ್ಲಿ ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ 90% ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ವಿವೇಕ ಪ್ರತಿಭಾ ಪುರಸ್ಕಾರ ಸಮಾರಂಭದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು. ಡಾ. ಎಚ್. ವಿ. ಡಂಬಳೆ, ಮಹಾಪೌರರಾದ ಜ್ಯೋತಿ ಪಾಟೀಲ್ ಜಿ.ಎಸ್ ಫೌಂಡೇಷನ್ ಸಂಸ್ಥಾಪಕ ಶಿವಕುಮಾರ್ ರಟ್ಟಿಹಳಿ , ಉಪಾಧ್ಯಕ್ಷ ವಿದ್ಯಾನಂದ ಸ್ವಾವರ್ಮಠ್, ಶಿವಯೋಗಿ ಹಾವೇರಿ, ಚಂದ್ರು, ಅಶ್ವಿನಿ ಅಂಗಡಿ, ಉಪಸ್ಥಿತರಿದ್ದರು.

# ಅಂತರ್ರಾಷ್ಟ್ರೀಯ ಆರ್ಯಭಟ ಪ್ರಶಸ್ತಿ

**ಬೆಳಗಾವಿ ವಾರ್ತೆ ಲಕ್ಷೇಶ್ವರ:** ಪಟ್ಟಣದ ಯುವ ಭರತನಾಟ್ಯ ಕಲಾವಿದೆ ತೇಜೋಮಯಿ ಗದ್ದಿ ಸದ್ಯ ಬೆಂಗಳೂರನಲ್ಲಿ ಭರತನಾಟ್ಯ ತರಬೇತಿ ಪಡೆಯುತ್ತಿದ್ದು ಇವಳ ಸಾಧನೆಗೆ ಇತ್ತೀಚಿಗೆ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಆರ್ಯಭಟ ಸಾಂಸ್ಕೃತಿಕ ಸಂಸ್ಥೆ ಆರ್ಯಭಟ ಪ್ರಶಸ್ತಿ ಕೊಡಮಾಡಿತು.

ಕಾರ್ಯಕ್ರಮದಲ್ಲಿ ದೂರದರ್ಶನ ವಿಶ್ರಾಂತ ಮಹಾ ನಿರ್ದೇಶಕ ಡಾ ಮಹೇಶ ಜೋಶಿ, ಖ್ಯಾತ ವಿಶ್ವಾಂಸ ಡಾ ಅರಳುಮಲ್ಲಿಗೆ ಪಾರ್ಥಸಾರಥಿ, ಆರ್ಯಭಟ ಸಾಂಸ್ಕೃತಿಕ ಸಂಸ್ಥೆ ಸಂಸ್ಥಾಪಕ ಅಧ್ಯಕ್ಷ ಡಾ ಎಚ್ ಎಲ್ ಎನ್ ರಾವ್ ಇದ್ದರು.



# ಹಿಂದೂ ಧರ್ಮೀಯ ಆಚರಣೆಗಳಲ್ಲಿ ಸನ್ಮಾರ್ಗವಿದೆ : ಸೀಮಾ

**ಬೆಳಗಾವಿ ವಾರ್ತೆ ತಾಳಿಕೋಟೆ:** ಆದಿ ಕಾಲದಿಂದಲೂ ಹಿಂದೂ ಧರ್ಮೀಯ ಪದ್ದತಿಗಳಲ್ಲಿ ಆಚರಿಸಿಕೊಂಡು ಬರಲಾಗುತ್ತಿರುವ ಹಬ್ಬ ಹರಿದಿನಗಳಲ್ಲಿ ಪುರಾಣ ಪ್ರವಚನಗಳಲ್ಲಿ ಅರ್ಥ ಗರ್ಬಿತವಾದಂತಹ ಸನ್ಮಾರ್ಗ ತೋರುವಂತ ಕಾರ್ಯ ನಡೆಯುತ್ತಾ ಸಾಗಿಬಂದಿದ್ದರೂ ಅಂತಹ ಆಚರಣೆ ಗಳಲ್ಲಿ ಅಧಿಕಮಾಸದಲ್ಲಿ ಪಡೆಯುವಂತಹ ಪೂಜಾ ಫಲವು ಸಹ ಒಂದಾಗಿದೆ ಎಂದು ಶ್ರೀ ಸೋಮವಂಶ ಆರ್ಯ ಕ್ಷತ್ರೀಯ ಸಮಾಜದ ಮಹಿಳಾ ಮಂಡಳದ ಹಿರಿಯರಾದ ಶ್ರೀಮತಿ ಸೀಮಾ ಚವ್ಹಾಣ ಅವರು ನುಡಿದರು.

ಮಂಗಳವಾರರಂದು ಶ್ರೀ ನಿಮಿಷಾಂಬಾದೇವಿ ಮಂದಿರದಲ್ಲಿ ಸೋಮವಂಶ ಆರ್ಯಕ್ಷತ್ರೀಯ ಸಮಾಜ ಮಹಿಳಾ ಮಂಡಳದ ವತಿಯಿಂದ ಅಧಿಕಮಾಸದ ನಿಮಿತ್ಯ ಏರ್ಪಡಿಸಲಾದ ಕುಂಕುಮಾರ್ಚನೆ ಮಹಾಪೂಜಾ ಕಾರ್ಯಕ್ರಮದ ನೇತೃತ್ವ ವಹಿಸಿ ಮಾತನಾಡುತ್ತಿದ್ದ ಅವರು ಅಧಿಕ ಎಂದರೆ ಹೆಚ್ಚು ಒಳ್ಳೆಯದಾಗಲಿ ಕೆಟ್ಟದ್ದಾಗಲಿ ಹೆಚ್ಚಿಗೆ ಆಗುವ ಕಾರ್ಯಗಳಿಗೆ ಅಧಿಕವೆನ್ನಲಾಗುತ್ತದೆ ಮೂರು ವರ್ಷಕ್ಕೊಮ್ಮೆ ಬರುವಂತಹ ಈ ಮಾಸದಲ್ಲಿ ಶ್ರೀ ದೇವಿಗೆ ಅರ್ಪಿಸಲಾಗುವಂತಹ ಕುಂಕುಮಾರ್ಚನೆಯು ಅತೀವ ಮಹತ್ವ ಪಡೆದುಕೊಂಡಿದೆ ಎಂದರು. ಇಂತಹ ಮಾಸದಲ್ಲಿ ದೇವಾದಿ ದೇವತೆಗಳ ಪೂಜೆ ನಡೆಯುವದು ಹೆಚ್ಚು ಆದರೆ ಲಗ್ನ ಮುಂಜವಿಗಳಂತಹ ಶುಭಕಾರ್ಯಗಳನ್ನು ಮಾಡುವದಿಲ್ಲಾ ಈ ಕುರಿತು ಶ್ರೀಗಳು ತಿಳಿಸಿಕೊಡಲಿದ್ದಾರೆಂದರು.

ಇನ್ನೋರ್ವ ದಿವ್ಯ ಸಾನಿಧ್ಯ ವಹಿಸಿ ಮಹಾಪೂಜಾ ಕಾರ್ಯಕ್ರಮವನ್ನು ನೆರವೇರಿಸಿ ಅಧಿಕಮಾಸವೆಂದರೇನು ಎಂಬುದರ ಕುರಿತು ತಿಳಿಹೇಳಿದ ಶ್ರೀ ವೆಂಕಟೇಶ್ವರ ಸಂಸ್ಕೃತ ಪಾಠಶಾಲೆಯ ವೇ॥ ಶ್ರೀ ವೆಂಕಟೇಶ ಆಚಾರ್ಯ ಗ್ರಾಮಪುರೋಹಿತ ಅವರು ಮಾತನಾಡಿ ಶಾಸ್ತ್ರ ಹೇಳಿದಂತೆ ಶಾಸ್ತ್ರ ಪ್ರಮಾಣವನ್ನು ಅರ್ಥೈಯಿಸಿಕೊಂಡು ನಡೆಯಬೇಕಾಗಿದೆ ಎಂದು 12 ಮಾಸಗಳ ಕುರಿತು ವಿವರಿಸಿದ ಅವರು ಸೂರ್ಯ ಒಂದು ರಾಶಿಯಿಂದ ಮತ್ತೊಂದು ರಾಶಿಗೆ ಸೇರುವದಕ್ಕೆ ಸಂಕ್ರಮಣ ಎಂದು ಕರೆಯಲಾಗುತ್ತದೆ ಸೂರ್ಯದೇವನು ಧನು ರಾಶಿ ಬಿಟ್ಟು ಮಕರ ರಾಶಿಗೆ ಹೋದಾಹ ಮಕರ ಸಂಕ್ರಮಣವೆನ್ನಲಾಗುತ್ತದೆ ಮೂರು ವರ್ಷಕ್ಕೊಮ್ಮೆ ಬರುವ ಅಧಿಕ ಮಾಸದಲ್ಲಿ ಯಾವ ಒಳ್ಳೆಯ ಕಾರ್ಯಗಳನ್ನು ಮಾಡುವದಿಲ್ಲಾ ಈ ಅಧಿಕಮಾಸಕ್ಕೆ ಪುರುಷೋತ್ತಮ ಮಾಸವೆಂದು ಕರೆಯಲಾಗುತ್ತದೆ ಈ ಅಧಿಕ ಮಾಸದಲ್ಲಿ ಮಾಡುವಂತಹ ಪೂಜಾ ಫಲವನ್ನು



ಭಗವಂತನೇ ಕೊಡುತ್ತಾನೆ ಶಾಸ್ತ್ರಗಳಲ್ಲಿ ತಿಳಿಸಿದಂತೆ ವಿಷಯಗಳನ್ನು ಅರಿತುಕೊಂಡು ಪೂಜೆ ಪುನಸ್ಕಾರಗಳನ್ನು ಹಾಗೂ ದಾನಧರ್ಮ ಮಾಡಬೇಕೆಂದು 18 ಪುರಾಣಗಳನ್ನು ರಚಿಸಿದ ವೇದವ್ಯಾಸರ ಕುರಿತು ತಿಳಿಹೇಳಿದ ಶ್ರೀಗಳು ನಿಂದನೆಯೆಂಬುದು ಬೇಡ ಇಂತದ್ದರಿಂದ ಶಿಕ್ಷೆಎಂಬುದು ಅನುಭವಿಸಬೇಕಾಗುತ್ತದೆ ಎಂಬುದು ಶಾಸ್ತ್ರಗಳಲ್ಲಿ ಹೇಳಲಾಗಿದೆ ದೇವರ ಪೂಜೆ ಮಾಡಿದರೆ ಇದ್ದುದ್ದರಲ್ಲಿಯೇ ದಾನಧರ್ಮ ಮಾಡಿ ದೇವನ ಒಲುಮೆ ಪಡೆಯಬೇಕೆಂದರು.

ಕಾರ್ಯಕ್ರಮದ ಮೊದಲಿಗೆ ಶ್ರೀ ನಿಮಿಷಾಂಬಾದೇವಿ ಅರ್ಚಕರಾದ ವೇ॥ ಯಲಗೂರೇಶ ಆಚಾರ್ಯ ಅವರು ಶ್ರೀ ದೇವಿಗೆ ಮಹಾಭಿಷೇಕ ಬಿಲ್ವಾರ್ಚನೆ ಪುಷ್ಪಾರ್ಚನೆ ಮಹಾಮಂಗಳಾರತಿ ನಡೆಸಿಕೊಟ್ಟರು.

ಈ ಸಮಯದಲ್ಲಿ ಸೋಮವಂಶ ಆರ್ಯಕ್ಷತ್ರೀಯ ಸಮಾಜದ ಮಹಿಳಾ ಮಂಡಳದ ಗೀತಾಬಾಯಿ ಉಭಾಳೆ, ಸಂಗೀತಾ ಬುಸಾರೆ, ಜ್ಯೋತಿ ಚೌಧರಿ, ಸವಿತಾ ಮಿರಜಕರ, ಸುನಿತಾ ಪಿಂಪಳೆ, ದೀಪಾ ಉಬಾಳೆ, ಅಕ್ಕಮ್ಮ ಚವ್ಹಾಣ, ಪೀತಾಂಭರಿ ಪಿಂಪಳೆ, ಜ್ಯೋತಿ ಚವ್ಹಾಣ, ಸವಿತಾ ಚವ್ಹಾಣ, ಅಂಬಿಕಾ ಪೇಠಕರ, ಸುನಿತಾ ಮಿರಜಕರ, ಜ್ಯೋತಿ ಉಭಾಳೆ, ಸಂಗೀತಾಬಾಯಿ ಉಭಾಳೆ ಮೊದಲಾದವರು ಪಾಲ್ಗೊಂಡಿದ್ದರು.

# ಅಮೆರಿಕ ಯುನಿವರ್ಸಿಟಿ– ಬಿಎಲ್ಡಿಇ ಡೀಮ್ಡ್ ವಿವಿ ಜೊತೆಗೆ ಒಡಂಬಡಿಕೆ




**ಬೆಳಗಾವಿ ವಾರ್ತೆ ವಿಜಯಪುರ:** ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯ ಮತ್ತು ಅಮೇರಿಕದ ಯುನಿವರ್ಸಿಟಿ ಆಫ್ ಇಲಿನಾಯಿಸ್ ಚಿಕ್ಯಾಗೊ ನಡುವೆ ಶೈಕ್ಷಣಿಕ ಒಡಂಬಡಿಕೆ ಮಾಡಿಕೊಳ್ಳಲಾಗಿದೆ.

ಕಳೆದ ಮಾರ್ಚ್ ತಿಂಗಳಲ್ಲಿ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಕುಲಪತಿ ಡಾ. ಅರುಣ ಚಂ. ಇನಾಮದಾರ ಅವರು ಅಮೇರಿಕಕ್ಕೆ ತೆರಳಿದ್ದರು. ಅಲ್ಲಿ ಇಲಿನಾಯಿಸ ವಿಶ್ವವಿದ್ಯಾಲಯ, ಚಿಕ್ಯಾಗೊ ಅಂತರಾಷ್ಟ್ರೀಯ ಆರೋಗ್ಯ ವಿಭಾಗದ ಅಸೋಶಿಯೇಟ ಡೀನ ಡಾ. ಪ್ರಭಾಕರ ಬೆಳ್ಳೂರ ಅವರೊಂದಿಗೆ ಈ ಒಡಂಬಡಿಕೆ ಕುರಿತು ಚರ್ಚಿಸಿದ್ದರು. ಈಗ ಒಡಂಬಡಿಕೆ ಮಾಡಿಕೊಳ್ಳಲಾಗಿದೆ. ಈ ಒಡಂಬಡಿಕೆಯಿಂದಾಗಿ ಎರಡೂ ವಿಶ್ವವಿದ್ಯಾಲಯಗಳು ಶೈಕ್ಷಣಿಕ ಸಹಭಾಗಿತ್ವದಲ್ಲಿ ಕಾರ್ಯ ನಿರ್ವಹಿಸಲಿವೆ.

ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಕುಲಾಧಿಪತಿ ಬಸನಗೌಡ ಎಂ, ಪಾಟೀಲ, ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ, ಕುಲಸಚಿವ ಡಾ. ರಾಘವೇಂದ್ರ ಕುಲಕರ್ಣಿ ಹಾಗೂ ವೈದ್ಯಕೀಯ ಮಹವಿದ್ಯಾಲಯದ ಪ್ರಾಚಾರ್ಯೆ ಡಾ. ತೇಜಸ್ವಿನಿ ವಲ್ಲಭ ಅವರ ಮಾರ್ಗದರ್ಶನದಲ್ಲಿ ಈ ಶೈಕ್ಷಣಿಕ ವರ್ಷದಿಂದಲೇ ಈ ಒಡಂಬಡಿಕೆ ಜಾರಿಗೆ ಬಂದಿದೆ. ಅದರಂತೆ ಬಿ. ಎಲ್. ಡಿ. ಇ. ಸಂಸ್ಥೆಯ ಅಧ್ಯಾಪಕರು ಮತ್ತು ವಿದ್ಯಾರ್ಥಿಗಳಿಗೆ ವಿದೇಶಿ ವಿಶ್ವವಿದ್ಯಾಲಯಗಳ ಶೈಕ್ಷಣಿಕ ಅನುಭವ ಮತ್ತು ಜಾಗತಿಕ ಮಟ್ಟದ ಪರಿಚಯವನ್ನು ಪಡೆಯಲು ಹೊಸ ಅವಕಾಶಗಳು ದೊರೆಯಲಿವೆ.

ಈಗ ಇಂಟರ್ನ್ ಆಗಿರುವ ವಿದ್ಯಾರ್ಥಿನಿ ಮೇಘನಾ ಅವರು ಯುನಿವರ್ಸಿಟಿ ಆಫ್ ಇಲಿನಾಯಿಸ್ ಚಿಕಾಗೊನಲ್ಲಿ ನ್ಯೂರೋಸರ್ಜರಿ ವಿಭಾಗದಲ್ಲಿ ಎಲೆಕ್ಟಿವ್ ತರಬೇತಿಗೆ ಆಯ್ಕೆಯಾಗಿರುವುದು ಗಮನಾರ್ಹವಾಗಿದೆ. ಇಂಥ ಅಂತಾರರಾಷ್ಟ್ರೀಯ ಶೈಕ್ಷಣಿಕ ಸಹಕಾರಗಳು ವಿದ್ಯಾರ್ಥಿಗಳ ಭವಿಷ್ಯಕ್ಕೆ ಹೊಸ ಅವಕಾಶಗಳನ್ನು ಸೃಷ್ಟಿಸಲಿದ್ದು, ಜಾಗತಿಕ ಮಟ್ಟದಲ್ಲಿ ಶೈಕ್ಷಣಿಕ ಹಾಗೂ ಸಂಶೋಧನೆ ಕ್ಷೇತ್ರಗಳಲ್ಲಿ ಉತ್ತಮ ಬೆಳವಣಿಗೆಗೆ ನೆರವಾಗಲಿವೆ ಎಂದು ವಿಶ್ವವಿದ್ಯಾಲಯದ ಸಂಶೋಧನಾ ವಿಭಾಗದ ಡೀನ್ ಡಾ. ಎಂ. ಎಂ. ಪಾಟೀಲ ಮಾಧ್ಯಮ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001